ದಾವಣಗೆರೆಯಿಂದ

# ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 107 Tuesday **13-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 107 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

## ಮೈಸೂರು ದಸರಾಕ್ಕಿಂತ ಮೊದಲೇ ಮಡ್ರಳ್ಳಿ ಚೌಡಮ್ಮ ದೇವಿಯ ಅಂಬು ಉತ್ಸವದ ಸಂಭ್ರಮ! ಅರಣ್ಯದ ಒಡಲಲ್ಲಿ ನೆಲೆಸಿರುವ ಬುಡಕಟ್ಟು ಸಮುದಾಯದ ಆರಾಧ್ಯ ದೈವದ ವಿಶಿಷ್ಟ ಆಚರಣೆ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಮೈಸೂರು ದಸರಾ ಉತ್ಸವದಲ್ಲಿ ಬನ್ನಿ ಮುಡಿಯುವ ಸಂಪ್ರದಾಯಕ್ಕೆ ವಿಶೇಷ ಮಹತ್ವವಿದೆ. ಆದರೆ, ಜಗಳೂರು ತಾಲೂಕಿನ ಅರಣ್ಯದ ಒಡಲಲ್ಲಿ ನೆಲೆಸಿರುವ ಬುಡಕಟ್ಟು ಸಮುದಾಯದ ಆರಾಧ್ಯ ದೈವವಾದ ಮಡ್ರಳ್ಳಿ ಚೌಡಮ್ಮ ದೇವಿಯ ಬನ್ನಿ ಮುಡಿಯುವ ಆಚರಣೆಯೇ ವಿಭಿನ್ನ. ಮೈಸೂರು ದಸರಾ ಸಂಭ್ರಮದ ಬನ್ನಿ ಆಚರಣೆಗೂ ಮೊದಲೇ ಇಲ್ಲಿ ಅಂಬು ಹೊಡೆಯುವ ಧಾರ್ಮಿಕ ಕೈಂಕರ್ಯ ನಡೆಯುವುದು ಈ ಭಾಗದ ವಿಶಿಷ್ಟ ಸಂಪ್ರದಾಯಕ್ಕೆ ಸಾಕ್ಷಿಯಾಗಿದೆ.

ನವರಾತ್ರಿ ಉತ್ಸವದ ಬಳಿಕ ಬನ್ನಿ ಮುಡಿಯುವುದು ಸಾಮಾನ್ಯವಾಗಿ ಕಂಡುಬರುವ ಪದ್ಧತಿ. ಆದರೆ, ಮಡ್ರಳ್ಳಿ ಚೌಡಮ್ಮ ದೇವಿಯ ಬನ್ನಿ ಉತ್ಸವವು ತನ್ನದೇ ಆದ ಆಚರಣಾ ಕ್ರಮ, ಕಟ್ಟುನಿಟ್ಟಿನ ವ್ರತ, ಮನೆತನಗಳ ಸಾಂಪ್ರದಾಯಿಕ ಜವಾಬ್ದಾರಿ ಹಾಗೂ ಅಚಲ ಧಾರ್ಮಿಕ ನಂಬಿಕೆಗಳಿಂದ ಗಮನ ಸೆಳೆಯುತ್ತದೆ. ದಸರಾ ಅಮಾವಾಸ್ಯೆಯ ನಂತರ ಬರುವ ಬುಧವಾರದಂದು ನಡೆಯುವ ಈ ಆಚರಣೆಯಲ್ಲಿ ಅರಣ್ಯದ ದೇವಾಲಯದಿಂದ ಗ್ರಾಮಕ್ಕೆ ದೇವಿಯ ಪಲ್ಲಕ್ಕಿ ಆಗಮಿಸುವುದರಿಂದ ಹಿಡಿದು ಬನ್ನಿ ರೆಂಬೆಯನ್ನು ಕಡಿಯುವವರೆಗೂ ಪ್ರತಿಯೊಂದು ವಿಧಿವಿಧಾನಕ್ಕೂ ವಿಶೇಷ ಮಹತ್ವವಿದೆ.

ಈ ಬಾರಿ ಅಕ್ಟೋಬರ್ 14ರ ಬುಧವಾರದಂದು ಚೌಡಮ್ಮ ದೇವಿಯ ಅಂಬು ಉತ್ಸವ ಹಾಗೂ ಬನ್ನಿ ಮುಡಿಯುವ ಕಾರ್ಯ ನಡೆಯಲಿದೆ.

**ಅರಣ್ಯದಿಂದ ಗ್ರಾಮಕ್ಕೆ ದೇವಿಯ ಪಲ್ಲಕ್ಕಿ ಮೆರವಣಿಗೆ**

ಚೌಡಮ್ಮ ದೇವಿಯ ಉತ್ಸವವು ಮಂಗಳವಾರ ರಾತ್ರಿ ಆರಂಭವಾಗುತ್ತದೆ. ಅರಣ್ಯದ ಒಡಲಲ್ಲಿ ನೆಲೆಸಿರುವ ಚೌಡಮ್ಮ ದೇವಿಯ ಮೂರ್ತಿಯನ್ನು ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ, ಗ್ರಾಮದಿಂದ ದೂರದಲ್ಲಿರುವ



ಅರಣ್ಯ ಪ್ರದೇಶದ ಮಧ್ಯಭಾಗದಲ್ಲಿನ ದೇವಾಲಯಕ್ಕೆ ಭಕ್ತಿಭಾವದಿಂದ ಕೊಂಡೊಯ್ಯಲಾಗುತ್ತದೆ.

ಅಲ್ಲಿ ದೇವಿಗೆ ವಿಶೇಷ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಗುತ್ತದೆ. ರಾತ್ರಿಯಿಡೀ ನಡೆಯುವ ಈ ಪೂಜಾ ಕೈಂಕರ್ಯದ ಬಳಿಕ ಬುಧವಾರ ಬೆಳಗಿನ ಜಾವ ಸುಮಾರು ಐದು ಗಂಟೆಗೆ ದೇವಿಯ ಪಲ್ಲಕ್ಕಿಯು ಮತ್ತೆ ಗ್ರಾಮಕ್ಕೆ ಆಗಮಿಸುತ್ತದೆ.

ದೇವಿಯ ಆಗಮನವು ಗ್ರಾಮಸ್ಥರಲ್ಲಿ ಭಕ್ತಿಯ ಸಂಭ್ರಮವನ್ನು ಮೂಡಿಸುತ್ತದೆ. ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಈ ಸಂಪ್ರದಾಯದಲ್ಲಿ ಗ್ರಾಮದ ವಿವಿಧ ಮನೆತನಗಳು ತಮ್ಮದೇ ಆದ ಧಾರ್ಮಿಕ ಜವಾಬ್ದಾರಿಗಳನ್ನು ನಿರ್ವಹಿಸುವುದು ವಿಶೇಷವಾಗಿದೆ.

**101 ತೆಂಗಿನಕಾಯಿ ಒಡೆದು ದೇವಿಗೆ ಆರತಿ**

ದೇವಿಯ ಪಲ್ಲಕ್ಕಿ ಗ್ರಾಮಕ್ಕೆ ಆಗಮಿಸಿದ ಬಳಿಕ ದೇಸಾಯಿ ಹಳ್ಳಪ್ಪ ಅವರ ಮನೆತನದವರು 101 ತೆಂಗಿನಕಾಯಿಗಳನ್ನು ಒಡೆದು, ದೇವಿಗೆ ಸುಗಮ ಆರತಿ ಬೆಳಗುವ ಸಂಪ್ರದಾಯವನ್ನು ನೆರವೇರಿಸುತ್ತಾರೆ.

ನಂತರ ಚೇರ್ಮನ್ ವೆಂಕಣ್ಣ ಅವರ ಮನೆತನದವರು ದೇವಿಗೆ ಬಾಗಿನ ಸಮರ್ಪಿಸುತ್ತಾರೆ. ಹೀಗೆ ಪ್ರತಿ ಮನೆತನವೂ ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ಸಂಪ್ರದಾಯವನ್ನು ಮುಂದುವರಿಸಿಕೊಂಡು ಬರುತ್ತಿದೆ.

ಇದು ಕೇವಲ ಧಾರ್ಮಿಕ ಆಚರಣೆಯಲ್ಲ; ಗ್ರಾಮದ ಕುಟುಂಬಗಳ ನಡುವಿನ ಪರಸ್ಪರ ಬಾಂಧವ್ಯ, ಸಂಪ್ರದಾಯದ ಮೇಲಿನ ಗೌರವ ಹಾಗೂ ಸಾಮೂಹಿಕ ನಂಬಿಕೆಯ ಪ್ರತೀಕವೂ ಆಗಿದೆ.

**110 ಬೆಲ್ಲದ ಆರತಿ ಬೆಳಗುವ ಮಹಿಳೆಯರು**

ಗ್ರಾಮದ ಮಧ್ಯಭಾಗದಲ್ಲಿರುವ ಬೇವಿನಕಟ್ಟೆಯ ಮೇಲೆ ದೇವಿಯ ಪಲ್ಲಕ್ಕಿಯನ್ನು ಪ್ರತಿಷ್ಠಾಪಿಸಲಾಗುತ್ತದೆ. ಈ ಸಂದರ್ಭದಲ್ಲಿ ಗ್ರಾಮದ ಮಹಿಳೆಯರು ಉಪವಾಸ ವ್ರತ ಆಚರಿಸಿ, 110 ಬೆಲ್ಲದ ಆರತಿಗಳನ್ನು ಬೆಳಗಿಸುವುದು ಉತ್ಸವದ ಮತ್ತೊಂದು ವಿಶೇಷ ಆಕರ್ಷಣೆಯಾಗಿದೆ.

ದೇವಿಯ ಮೇಲಿನ ಭಕ್ತಿ, ಕುಟುಂಬದ ಒಳಿತಿನ ಹಾರೈಕೆ ಹಾಗೂ ಗ್ರಾಮದ ಸುಭಿಕ್ಷಕ್ಕಾಗಿ ಮಹಿಳೆಯರು ಶ್ರದ್ಧಾಭಕ್ತಿಯಿಂದ ಈ ಧಾರ್ಮಿಕ ಕೈಂಕರ್ಯದಲ್ಲಿ ಪಾಲ್ಗೊಳ್ಳುತ್ತಾರೆ.

ಬೇವಿನಕಟ್ಟೆಯಲ್ಲಿ ಪೂಜಾ ವಿಧಿವಿಧಾನಗಳು ಮುಗಿದ ಬಳಿಕ ದೇವಿಯ



ಪಲ್ಲಕ್ಕಿಯು ಗ್ರಾಮದ ಮಧ್ಯದಲ್ಲಿರುವ ದೊಡ್ಡ ಚೌಡಮ್ಮ ದೇವಾಲಯಕ್ಕೆ ತೆರಳುತ್ತದೆ. ಅಲ್ಲಿ ಮುಂದಿನ ಧಾರ್ಮಿಕ ಕಾರ್ಯಗಳು ನಡೆಯುತ್ತವೆ.

**ಬನ್ನಿ ಮುಡಿಯುವ ಜವಾಬ್ದಾರಿ ನಿರ್ದಿಷ್ಟ ಮನೆತನಕ್ಕೆ!**

ಚೌಡಮ್ಮ ದೇವಿಯ ಬನ್ನಿ ಉತ್ಸವದಲ್ಲಿ ಬನ್ನಿ ಮುಡಿಯುವ ಕಾರ್ಯಕ್ಕೆ ವಿಶೇಷ ಸ್ಥಾನವಿದೆ. ನಿಂಗಜ್ಜರ ಜ್ವರ ಬೋಪ್ಪರ ಮನೆತನದವರು ಬನ್ನಿ ಮುಡಿಯುವ ಸಾಂಪ್ರದಾಯಿಕ ಜವಾಬ್ದಾರಿಯನ್ನು ನಿರ್ವಹಿಸುತ್ತಾರೆ ಎಂದು ಗ್ರಾಮಸ್ಥರು ತಿಳಿಸುತ್ತಾರೆ.

ಇಲ್ಲಿನ ಆಚರಣೆಯಲ್ಲಿ ಬನ್ನಿ ಮರದ ಕೊಂಬೆಯನ್ನು ಕಡಿಯುವ ವಿಧಾನವೇ ಅತ್ಯಂತ ವಿಶಿಷ್ಟವಾಗಿದೆ. ದೇವಿಯ ಆಜ್ಞೆಯಂತೆ ಬನ್ನಿ ಮರದ ಒಂದೇ ರೆಂಬೆಯಲ್ಲಿ ಐದು ಎಸಳುಗಳಿರುವ ಕೊಂಬೆಯನ್ನು ಒಂದೇ ಏಟಿಗೆ ಕಡಿಯಬೇಕು ಎಂಬ ನಂಬಿಕೆ ಇದೆ.

ಈ ಕಾರ್ಯವನ್ನು ನೆರವೇರಿಸುವ ವ್ಯಕ್ತಿಯೂ ಉಪವಾಸ ವ್ರತ ಆಚರಿಸಬೇಕೆಂಬ ಸಂಪ್ರದಾಯವಿದೆ. ಬನ್ನಿ ರೆಂಬೆಯನ್ನು ಕಡಿಯುವ ಮೊದಲು ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಬಳಿಕ



ಬನ್ನಿ ಮರದ ಬಳಿಗೆ ತೆರಳಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಗುತ್ತದೆ.

ಬನ್ನಿ ರೆಂಬೆಯನ್ನು ಒಂದೇ ಏಟಿಗೆ ಕಡಿಯುವುದು ಕೇವಲ ಒಂದು ವಿಧಿಯಲ್ಲ; ದೇವಿಯ ಮೇಲಿನ ನಂಬಿಕೆ, ಭಕ್ತಿಯ ಶ್ರದ್ಧೆ ಹಾಗೂ ತಲೆಮಾರುಗಳಿಂದ ಪಾಲಿಸಿಕೊಂಡು ಬಂದಿರುವ ಸಂಪ್ರದಾಯದ ಭಾಗವಾಗಿದೆ ಎಂಬುದು ಗ್ರಾಮಸ್ಥರ ನಂಬಿಕೆ.

**ತಲೆಮಾರುಗಳಿಂದ ಉಳಿದು ಬಂದಿರುವ ಸಾಂಸ್ಕೃತಿಕ ಪರಂಪರೆ**

ಗ್ರಾಮೀಣ ಭಾರತದ ಧಾರ್ಮಿಕ ಆಚರಣೆಗಳು ಆಯಾ ಪ್ರದೇಶದ ಇತಿಹಾಸ, ಜನಜೀವನ ಹಾಗೂ ಸಮುದಾಯದ ನಂಬಿಕೆಗಳನ್ನು ಪ್ರತಿಬಿಂಬಿಸುತ್ತವೆ. ಮಡ್ರಳ್ಳಿ ಚೌಡಮ್ಮ ದೇವಿಯ ಬನ್ನಿ ಉತ್ಸವವೂ ಅಂತಹ ವಿಶಿಷ್ಟ ಪರಂಪರೆಗಳಲ್ಲಿ ಒಂದಾಗಿದೆ.

ಅರಣ್ಯದ ಮಧ್ಯದಲ್ಲಿರುವ ದೇವಾಲಯ, ರಾತ್ರಿಯ ಪಲ್ಲಕ್ಕಿ ಮೆರವಣಿಗೆ, 101 ತೆಂಗಿನಕಾಯಿಗಳ ಸಮರ್ಪಣೆ, 110 ಬೆಲ್ಲದ ಆರತಿ ಹಾಗೂ ಐದು ಎಸಳುಗಳಿರುವ ಬನ್ನಿ ರೆಂಬೆಯನ್ನು ಒಂದೇ ಏಟಿಗೆ ಕಡಿಯುವ ಸಂಪ್ರದಾಯ–ಇವೆಲ್ಲವೂ ಈ ಆಚರಣೆಗೆ ವಿಶಿಷ್ಟ ಗುರುತನ್ನು ನೀಡಿವೆ.

ಇಂದಿನ ಆಧುನಿಕ ಜೀವನಶೈಲಿಯ ನಡುವೆಯೂ ಇಂತಹ ಆಚರಣೆಗಳು ಮುಂದುವರಿಯುತ್ತಿರುವುದು ಸ್ಥಳೀಯ ಸಂಸ್ಕೃತಿ ಹಾಗೂ ಪರಂಪರೆಯ ಮೇಲಿನ ಜನರ ಪ್ರೀತಿಯನ್ನು ತೋರಿಸುತ್ತದೆ. ಹಿರಿಯರಿಂದ ಕಿರಿಯರಿಗೆ ವರ್ಗಾವಣೆಯಾಗುವ ಈ ಸಂಪ್ರದಾಯವನ್ನು ಮುಂದಿನ ಪೀಳಿಗೆಗೂ ಪರಿಚಯಿಸುವುದು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಯ ದೃಷ್ಟಿಯಿಂದ ಮಹತ್ವದ್ದಾಗಿದೆ.

ಈ ಕುರಿತು ಗ್ರಾಮದ ಪ್ರಕಾಶ್ ಅವರು ಮಾತನಾಡಿ, "ದೇವಿಯ ಆಜ್ಞೆಯಂತೆ ಐದು ಎಸಳುಗಳಿರುವ ಬನ್ನಿ ರೆಂಬೆಯನ್ನು ಒಂದೇ ಏಟಿಗೆ ಕಡಿಯುವ ಸಂಪ್ರದಾಯವಿದೆ. ಈ ಕಾರ್ಯವನ್ನು ನೆರವೇರಿಸುವ ವ್ಯಕ್ತಿಯೂ ಉಪವಾಸವಿದ್ದು, ಪೂಜಾ ವಿಧಿವಿಧಾನಗಳನ್ನು ಪಾಲಿಸಬೇಕು. ಇದು ನಮ್ಮ ಗ್ರಾಮದಲ್ಲಿ ತಲೆಮಾರುಗಳಿಂದ ನಡೆದುಕೊಂಡು ಬಂದಿರುವ ವಿಶಿಷ್ಟ ಆಚರಣೆ" ಎಂದು ವಿವರಿಸುತ್ತಾರೆ.

ಒಟ್ಟಾರೆ, ಮೈಸೂರು ದಸರಾ ಉತ್ಸವದ ಬನ್ನಿ ಸಂಭ್ರಮಕ್ಕೂ ಮೊದಲೇ ನಡೆಯುವ ಮಡ್ರಳ್ಳಿ ಚೌಡಮ್ಮ ದೇವಿಯ ಅಂಬು ಉತ್ಸವವು ಜಗಳೂರು ತಾಲೂಕಿನ ಬುಡಕಟ್ಟು ಸಮುದಾಯದ ಧಾರ್ಮಿಕ ನಂಬಿಕೆ, ಸಾಂಸ್ಕೃತಿಕ ವೈಶಿಷ್ಟ್ಯ ಹಾಗೂ ಪರಂಪರೆಯ ಶ್ರೀಮಂತಿಕೆಯನ್ನು ಸಾರುವ ಅಪರೂಪದ ಆಚರಣೆಯಾಗಿದೆ.

## ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳಿಂದ ಶಾಸಕ ಬಿ. ದೇವೇಂದ್ರಪ್ಪ ಅವರಿಗೆ ಅಭಿನಂದನೆ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮದ ವತಿಯಿಂದ 2025–26ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳು ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಹಾಗೂ ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.

ಯೋಜನೆಯಡಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಫಲಾನುಭವಿಗಳು ಶಾಸಕರನ್ನು ಹಾಗೂ ಕಾಂಗ್ರೆಸ್ ಮುಖಂಡ ಎಂ.ಡಿ. ಕೀರ್ತಿಕುಮಾರ್ ಅವರನ್ನು ಭೇಟಿ ಮಾಡಿ ತಮ್ಮ ಸಂತಸವನ್ನು ವ್ಯಕ್ತಪಡಿಸಿದರು. ಈ ಯೋಜನೆಯು ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಾವರಿ ಸೌಲಭ್ಯ ಕಲ್ಪಿಸಲು ನೆರವಾಗಲಿದ್ದು, ಇದರಿಂದ ಕೃಷಿಯನ್ನೇ ಅವಲಂಬಿಸಿರುವ



ಕುಟುಂಬಗಳಿಗೆ ಅನುಕೂಲವಾಗುವ ನಿರೀಕ್ಷೆಯಿದೆ.

**ಕೃಷಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಮಹತ್ವದ ಯೋಜನೆ**

ಗಂಗಾ ಕಲ್ಯಾಣ ಯೋಜನೆಯು ಅರ್ಹ ಫಲಾನುಭವಿಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಉದ್ದೇಶ ಹೊಂದಿದೆ. ಮಳೆಯನ್ನೇ ಅವಲಂಬಿಸಿ ಕೃಷಿ ಮಾಡುವ ರೈತರಿಗೆ ನೀರಿನ ಸೌಲಭ್ಯ ದೊರೆತರೆ ಬೆಳೆಗಳನ್ನು ಬೆಳೆಯಲು ಹಾಗೂ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಿಕೊಳ್ಳಲು ಸಹಕಾರಿಯಾಗಲಿದೆ. ಅದರಲ್ಲೂ ಮಳೆಯ ಅನಿಶ್ಚಿತತೆ ಎದುರಿಸುವ ಪ್ರದೇಶಗಳಲ್ಲಿ ನೀರಾವರಿ ಸೌಲಭ್ಯವು ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಬಲ ನೀಡುವ ನಿರೀಕ್ಷೆಯಿದೆ.

ಯೋಜನೆಯಡಿ ಆಯ್ಕೆಯಾಗಿರುವುದರಿಂದ ಫಲಾನುಭವಿಗಳಲ್ಲಿ ಸಂತಸ ಮೂಡಿದ್ದು, ಕೃಷಿ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಡೆಸಲು ಅನುಕೂಲವಾಗಲಿದೆ ಎಂಬ ಆಶಾಭಾವನೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳು ಉಪಸ್ಥಿತರಿದ್ದರು.

## ರಾಷ್ಟ್ರಮಟ್ಟದ ಹರ್ಡಲ್ಸ್‌ನಲ್ಲಿ ಬೆಳ್ಳಿ ಪದಕ ವಿಜೇತೆ ಮಾನ್ಯಗೆ ಸನ್ಮಾನ

### ಈ ಬಾರಿ ಚಿನ್ನದ ಪದಕ ಗೆದ್ದು ರಾಜ್ಯಕ್ಕೆ ಕೀರ್ತಿ ತರಲಿ: ಎಂ.ಡಿ. ಕೀರ್ತಿಕುಮಾರ್

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ತಾಲೂಕಿನ ಖಿಲಾಕಣಕುಪ್ಪೆ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ಸಣ್ಣ ಓಬಯ್ಯ ಅವರ ಪುತ್ರಿ ಮಾನ್ಯ ಅವರು ರಾಷ್ಟ್ರಮಟ್ಟದ ಹರ್ಡಲ್ಸ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದು ಸಾಧನೆ ಮಾಡಿರುವುದು ಗ್ರಾಮೀಣ ಭಾಗಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಈ ಹಿನ್ನೆಲೆಯಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರ ಗೃಹ ಕಚೇರಿಗೆ ಆಗಮಿಸಿದ್ದ ಕ್ರೀಡಾಪಟು ಮಾನ್ಯ ಅವರನ್ನು ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಸನ್ಮಾನಿಸಿ ಗೌರವಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಎಂ.ಡಿ. ಕೀರ್ತಿಕುಮಾರ್, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುತ್ತಿರುವುದು ಸಂತಸದ ವಿಚಾರವಾಗಿದೆ. ಸೀಮಿತ ಸೌಲಭ್ಯಗಳ ನಡುವೆಯೂ ಕಠಿಣ ಪರಿಶ್ರಮ, ನಿರಂತರ ಅಭ್ಯಾಸ ಹಾಗೂ ಛಲದಿಂದ ಸಾಧನೆ ಮಾಡಿರುವ ಮಾನ್ಯ ಅವರ ಪ್ರಯತ್ನ ಇತರ ವಿದ್ಯಾರ್ಥಿಗಳಿಗೂ ಪ್ರೇರಣೆಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಕಳೆದ ಬಾರಿ ರಾಷ್ಟ್ರಮಟ್ಟದ ಹರ್ಡಲ್ಸ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಗೆದ್ದಿರುವ ಮಾನ್ಯ ಅವರು ಈ ಬಾರಿ ಚಿನ್ನದ ಪದಕ ಗೆದ್ದು ನಾಡಿಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಮಾನ್ಯ ಅವರ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

## ಆಗ್ನೇಯ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೆ.ಎಂ. ಸುರೇಶ್ ಪರ ದೇವಿಕೆರೆ ಭಾಗದಲ್ಲಿ ಮತಯಾಚನೆ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಗಳು ಹಾಗೂ ಜನಪರ ಕೊಡುಗೆಗಳೇ ಬಿಜೆಪಿಯ ಶಕ್ತಿಯಾಗಿವೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಹಾಗೂ ಮುಖ್ಯ ಸಚೇತಕ ಶಿವಯೋಗ ಸ್ವಾಮಿ ಹೇಳಿದರು.

ತಾಲೂಕಿನ ಬಿಳಿಚೋಡು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ದೇವಿಕೆರೆ ಸೇರಿದಂತೆ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ಸೋಮವಾರ ಭೇಟಿ ನೀಡಿ, ಆಗ್ನೇಯ ಪದವೀಧರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಕೆ.ಎಂ. ಸುರೇಶ್ ಪರ ಮತಯಾಚಿಸಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶವು ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿಯತ್ತ ಸಾಗುತ್ತಿದೆ. ಕೇಂದ್ರ ಸರ್ಕಾರದ ಜನಪರ ಯೋಜನೆಗಳು, ಅಭಿವೃದ್ಧಿ ಕಾರ್ಯಗಳು ಹಾಗೂ ದೇಶದ



ಪ್ರಗತಿಗೆ ಕೈಗೊಂಡಿರುವ ಕ್ರಮಗಳು ಜನರಲ್ಲಿ ವಿಶ್ವಾಸ ಮೂಡಿಸಿವೆ. ಈ ಹಿನ್ನೆಲೆಯಲ್ಲಿ ಪದವೀಧರ ಮತದಾರರು ಬಿಜೆಪಿಯ ಅಭ್ಯರ್ಥಿ ಕೆ.ಎಂ. ಸುರೇಶ್ ಅವರನ್ನು ಬೆಂಬಲಿಸುವ ಮೂಲಕ ಪಕ್ಷದ ಗೆಲುವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಪದವೀಧರ ಕ್ಷೇತ್ರದ ಚುನಾವಣೆ ಶಿಕ್ಷಿತ ಮತದಾರರ ಆಶಯಗಳು ಮತ್ತು ನಿರೀಕ್ಷೆಗಳಿಗೆ ಸಂಬಂಧಿಸಿದ ಮಹತ್ವದ ಚುನಾವಣೆಯಾಗಿದೆ. ಪದವೀಧರರ ಸಮಸ್ಯೆಗಳು, ಉದ್ಯೋಗಾವಕಾಶಗಳು ಹಾಗೂ ಅವರ ಹಿತಾಸಕ್ತಿಗಳಿಗೆ ಸ್ಪಂದಿಸುವ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಬಿಜೆಪಿ ಅಭ್ಯರ್ಥಿ ಕೆ.ಎಂ. ಸುರೇಶ್ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಬಿಳಿಚೋಡು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ದೇವಿಕೆರೆ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯ ಮುಖಂಡರೊಂದಿಗೆ ಚರ್ಚಿಸಿ ಅಭ್ಯರ್ಥಿಯ ಪರವಾಗಿ ಮತಯಾಚನೆ ನಡೆಸಿದರು. ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಲು ಕಾರ್ಯಕರ್ತರು ಸಂಘಟಿತವಾಗಿ ಶ್ರಮಿಸಬೇಕು ಎಂದು ಕರೆ ನೀಡಿದರು.

ಮುಖಂಡರು ಭಾಗಿ: ಈ ಸಂದರ್ಭದಲ್ಲಿ ಹಾವೇರಿ ಜಿಲ್ಲಾ ಪ್ರಭಾರಿಯಾದ ಕಲ್ಲೇಶ್, ಜಿಲ್ಲಾ ಸಂಚಾಲಕ ಬಾತಿ ವೀರೇಶ್, ತಾಲೂಕು ಸಂಚಾಲಕ ಪತ್ರೇಶ್, ಬಿಜೆಪಿ ಮಂಡಲ ಅಧ್ಯಕ್ಷ ಎ.ಎಂ. ಮರುಳಾರಾಧ್ಯ, ಪ್ರಧಾನ ಕಾರ್ಯದರ್ಶಿ ಧರ್ಮ ನಾಯ್ಕ, ದೇವಿಕೆರೆ ಶಿವಕುಮಾರ ಸ್ವಾಮಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು

# 27 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ

**"ಮುಂಜಾನೆಯ ಮೆರಗು"**

**ದಾವಣಗೆರೆ, ಅ.12 ಅ, 12–** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕವಾಗಿ, ದಕ್ಷತೆಯಿಂದ ಮತ್ತು ಪ್ರಾಮಾಣಿಕವಾಗಿ ಪ್ರಕ್ರಿಯೆ ಪೂರ್ಣಗೊಳಿಸಲು ಮತಗಟ್ಟೆ ಅಧಿಕಾರಿಗಳು ಸೇರಿದಂತೆ ಎಲ್ಲಾ ಅಧಿಕಾರಿಗಳು ಉತ್ತಮ ಕೆಲಸ ಮಾಡುವ ಮೂಲಕ ಯಾವುದೇ ದೂರುಗಳಿಗೆ ಆಸ್ಪದ ನೀಡಿರುವುದಿಲ್ಲ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ತಿಳಿಸಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪದವೀಧರ ಕ್ಷೇತ್ರದ ಚುನಾವಣೆ ಕುರಿತು ಹಾಗೂ ಚುನಾವಣೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.



ಶೇಕಡಾ 100ರಷ್ಟು ಎಸ್ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಒಟ್ಟು 7,086 ನೋಟಿಸ್‌ಗಳನ್ನು ನೀಡಲಾಗಿದೆ. ಇದರಲ್ಲಿ 180 ಮತದಾರರು ಮೃತಪಟ್ಟವರು ಮತ್ತು ಎರಡು ಕಡೆ ಇರುವವರು, ನೇಪಾಳಿ 5 ಪ್ರಜೆಗಳು, ವಿದೇಶದಲ್ಲಿರುವ ಒಬ್ಬರು ಮಾತ್ರ ಪಟ್ಟಿಯಿಂದ ತಿರಸ್ಕರಿಸಲಾಗಿದೆ. ಇದಕ್ಕೆ ದಾಖಲೆ ಸಮೇತ ಕಾರಣ ತಿಳಿಸಿ ಈ ಎಲ್ಲಾ ಪಟ್ಟಿಗಳನ್ನು ಎಲ್ಲಾ ರಾಜಕೀಯ ಪಕ್ಷಗಳಿಗಳ ಜೊತೆ ಹಂಚಿಕೊಳ್ಳಲಾಗಿದೆ. ಯಾವ ಪಕ್ಷ ಮತ್ತು ಯಾವ ಕ್ಷೇತ್ರವೆಂಬ ಸಂಪೂರ್ಣ ಮಾಹಿತಿಯನ್ನು ನೀಡಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27 ರಂದು ಪ್ರಕಟಿಸಲಾಗುವುದು ಎಂದರು.

ನಮೂನೆ 6, 6ಂ, 7 ಮತ್ತು 8ರ ಮತದಾರರ ಪಟ್ಟಿಗೆ ಸೇರ್ಪಡೆ, ಪಟ್ಟಿಯಲ್ಲಿನ ಹೆಸರು ತಿದ್ದುಪಡಿ , ಮತಪಟ್ಟಿಯಿಂದ ವರ್ಗಾವಣೆ ಮಾಹಿತಿಯನ್ನು ಕೂಡ ಜಿಲ್ಲೆಯ ಎಲ್ಲಾ ರಾಜಕೀಯ ಪಕ್ಷಗಳಿಗೆ ಒದಗಿಸಲಾಗಿದೆ. ಮತದಾರರ ಪಟ್ಟಿಗೆ ಸೇರ್ಪಡೆ, ಪಟ್ಟಿಯಲ್ಲಿನ ಹೆಸರು ತಿದ್ದುಪಡಿ , ಮತಪಟ್ಟಿಯಿಂದ ವರ್ಗಾವಣೆ ನಿರಂತರ ಪ್ರಕ್ರಿಯೆಯಾಗಿದ್ದು ಮತದಾರರು ಯಾವಾಗ ಬೇಕಾದರೂ ಈ ಪ್ರಕ್ರಿಯೆಗಳನ್ನು ಕೈಗೊಳ್ಳಬಹುದು ಎಂದು ತಿಳಿಸಿದರು.

ಚುನಾವಣಾ ಆಯೋಗದ ನಿರ್ದೇಶನಗಳು ಮತ್ತು ಸುತ್ತೋಲೆಗಳಂತೆ ಎಲ್ಲಾ ಸಿಬ್ಬಂದಿ ಅಧಿಕಾರಿಗಳು ತಮ್ಮನ್ನು ತಾವು ತೊಡಗಿಸಿಕೊಂಡು ಎಸ್.ಐ.ಆರ್ ಕೆಲಸವನ್ನು ಪರಿಪೂರ್ಣವಾಗಿ ಮುಗಿಸಿಕೊಟ್ಟಿದ್ದಾರೆ ಎಂದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರ ಚುನಾವಣೆ–2026– 43 ಮತಗಟ್ಟೆಗಳು
# ಮತದಾನ ಮಾಡಲು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಮನವಿ

**"ಮುಂಜಾನೆಯ ಮೆರಗು"**

**ದಾವಣಗೆರೆ, ಅ.12,** ಮೂರು ತಾಲ್ಲೂಕುಗಳಲ್ಲಿ ಒಟ್ಟು 43 ಮತ ಕೇಂದ್ರಗಳಲ್ಲಿ ಅಕ್ಟೋಬರ್ 23 ರಂದು ಚುನಾವಣೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಜಿ. ಎಂ. ಗಂಗಾಧರಸ್ವಾಮಿ ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪತ್ರಕರ್ತರೊಂದಿಗೆ ಔಪಚಾರಿಕವಾಗಿ ಮಾತನಾಡಿದರು.

ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರ ಚುನಾವಣೆ ದಾವಣಗೆರೆ, ಹರಿಹರ ಹಾಗೂ ಜಗಳೂರು ತಾಲ್ಲೂಕಿಗೆ ಅನ್ವಯಿಸಲಿದ್ದು ಈ ಜಿಲ್ಲೆಗೆ ಸಂಬಂಧಿಸಿದಂತೆ 17660 ಪುರುಷ, 13956 ಮಹಿಳಾ ಮತದಾರರು ಸೇರಿ ಒಟ್ಟು 31616 ಮತದಾರರಿದ್ದಾರೆ. ಮತದಾರರು ತಮ್ಮ ಹೆಸರುಗಳನ್ನು ದಾವಣಗೆರೆ , ಹರಿಹರ ಜಗಳೂರು ತಾಲ್ಲೂಕು ಕಚೇರಿಗಳಲ್ಲಿ ಮತ್ತು ತಿತಿತಿ.ಛಿಜಠಇಚಿಡಿಟಿಜಿಣಚಿಇಚಿ.ಇಚಿಡಿ.ಟಿಡಿಛಿಟಿ ಮತ್ತು ಛಿಣಣಠಿ://ಜಚಿ–ತಜಚಿಟಿಚಿರಜಡಿಜ.ಟಿಡಿಛಿಟಿ ವೆಬ್ ಸೈಟ್‌ನಲ್ಲಿ ಪರಿಶೀಲಿಸಿಕೊಳ್ಳಬಹುದು ಎಂದು ತಿಳಿಸಿದರು.

43–ಮತಗಟ್ಟೆಗಳ ವಿವರ :

ಮತದಾನವು ಹರಿಹರ 10 ಮತಗಟ್ಟೆಗಳಲ್ಲಿ ದಾವಣಗೆರೆ ಉತ್ತರ–17 , ದಾವಣಗೆರೆ ದಕ್ಷಿಣ–06 , ಮಯಾಕೊಂಡ–6 ಮತ್ತು ಜಗಳೂರು –4 ಮತಗಟ್ಟೆಗಳಲ್ಲಿ ನಡೆಯಲಿದೆ.

ಹರಿಹರ–6 : ಮರಿಯಾ ನಿವಾಸ್ ಹೈಯರ್ ಪ್ರೈಮರಿ ಶಾಲೆ ಕೊಠಡಿ ಸಂಖ್ಯೆ 1 ಮತ್ತು 2 , ಎಸ್.ಜಿ.ಆರ್.ಕೆ.ಎಸ್ ಪ್ರಥಮ ದರ್ಜೆ ಮಹಿಳಾ ಕಾಲೇಜು ಕೊಠಡಿ ಸಂ–ಖ್ಯೆ 1 ಮತ್ತು 2 , ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಗಾಂಧಿ ಮೈದಾನ ಕೊಠಡಿ ಸಂಖ್ಯೆ 1 ಮತ್ತು 2.

ಮಲೆಬೆನ್ನೂರು–4 : ಸರ್ಕಾರಿ ಪದವಿ ಪೂರ್ವ ಕಾಲೇಜು ಜಿಗಳಿ ರಸ್ತೆ ಕೊಠಡಿ ಸಂಖ್ಯೆ 1,2,3 ಮತ್ತು 4.

ದಾವಣಗೆರೆ: ರಾಜನಹಳ್ಳಿ ಸೀತಮ್ಮ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು 1,2,3,4 , ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ಪಿ.ಜೆ ಬಡಾವಣೆ ಕೊಠಡಿ ಸಂಖ್ಯೆ 1,2,3 4 ಮತ್ತು 5, ಅಶೋಕ ರಸ್ತೆ ಮಹಿಳಾ ಸೇವಾ ಸಮಾಜ ಶ್ರೀಮತಿ ಟಿ ಎಂ ಚಿನ್ನಮ್ಮ ಮಹೇಶ್ವರಯ್ಯ



ಮೆಮೆರಿಯಲ್ ಪದವಿ ಪೂರ್ವ ಕಾಲೇಜು ಕೊಠಡಿ ಸಂಖ್ಯೆ 1,2,3,4,5,6 ಮತ್ತು7, ಡಯಟ್ ಕೊಠಡಿ ಸಂಖ್ಯೆ 1,2 ಮತ್ತು 3, ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು ಕೊಠಡಿ ಸಂಖ್ಯೆ 1,2,3 ಮತ್ತು 4.

ಆನಗೋಡು–2: ಸರ್ಕಾರಿ ಹಿರಿಯ ಹೈಯರ್ ಪ್ರಾಥಮಿಕ ಶಾಲೆ ಕೊಠಡಿ ಸಂಖ್ಯೆ 1 ಮತ್ತು 2, ಅಣಜಿ ಸರ್ಕಾರಿ ಮೊಡೆಲ್ ಹೈಯರ್ ಪ್ರಾಥಮಿಕ ಶಾಲೆ ಕೊಠಡಿ ಸಂಖ್ಯೆ 1 , ಮಯಾಕೊಂಡ ಸರ್ಕಾರಿ ಕೆ.ಪಿ.ಎಸ್ ಶಾಲೆ ಕೊಠಡಿ ಸಂ–ಖ್ಯೆ1 , ಲೋಕಿಕೆರೆ ಮಾರುತಿ ಸರ್ಕಾರಿ ಪ್ರೌಡಶಾಲೆ ಕೊಠಡಿ ಸಂಖ್ಯೆ 1 ಮತ್ತು 2 , ಜಗಳೂರು ಡಾ.ಬಿ.ಆರ್ . ಅಂಬೇಡ್ಕರ್ ವೃತ್ತ ಸರ್ಕಾರಿ ಪದವಿ ಪೂರ್ವ ಕಾಲೇಜು ಕೊಠಡಿ ಸಂಖ್ಯೆ 1 ಮತ್ತು 2, 1–ಹೊಸಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜು ,1– ಜಗಳೂರು ಬಿಳಿಚೋಡು ಸರ್ಕಾರಿ ಕೆ.ಪಿ.ಎಸ್ ಮತ್ತು ಕಾಲೇಜು ವಿಭಾಗ

ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಮಮತಾ ಹೊಸಗೌಡರ್, ಮಹಾನಗರ ಪಾಲಿಕೆ ಆಯುಕ್ತ ಮಹಾಂತೇಶ್ ಹಾಗೂ ಇತರರು ಉಪಸ್ಥಿತರಿದ್ದರು.

# ಪದವೀಧರರ ಸಮಸ್ಯೆಗಳಿಗೆ ಪರಿಣಾಮಕಾರಿ ಧ್ವನಿಯಾಗಲು ಶಶಿ ಹುಲಿಕುಂಟೆಮಠ್ ಅವರನ್ನು ಗೆಲ್ಲಿಸಿ: ಸಚಿವ ಎಸ್.ಎಸ್.ಮಲ್ಲಿಕಾರ್ಜುನ

**"ಮುಂಜಾನೆಯ ಮೆರಗು"**

**ದಾವಣಗೆರೆ ಅ, 12–** ಪದವೀಧರರ ಸಮಸ್ಯೆಗಳಿಗೆ ಸ್ಪಂದಿಸುವುದು, ಅವರ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ರಕ್ಷಿಸುವುದು ಹಾಗೂ ಅವರ ಆಶೋತ್ತರಗಳಿಗೆ ವಿಧಾನ ಪರಿಷತ್‌ನಲ್ಲಿ ಪರಿಣಾಮಕಾರಿಯಾಗಿ ಧ್ವನಿಯಾಗುವುದು ಇಂದಿನ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಆಗ್ನೇಯ ಪದವೀಧರರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರನ್ನು ಬೆಂಬಲಿಸಿ ಗೆಲ್ಲಿಸಲು ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಪದವೀಧರ ಮತದಾರರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಮನವಿ ಮಾಡಿದರು.

ನಗರದ ಬಾಪೂಜಿ ಎಂಬಿಎ ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಆಗ್ನೇಯ ಪದವೀಧರರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರ ಪರ ಮತಯಾಚನೆ ಹಾಗೂ ಪಕ್ಷದ ಮುಖಂಡರು, ಕಾರ್ಯಕರ್ತರು ಮತ್ತು ಪದವೀಧರ ಮತದಾರರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪದವೀಧರರ ಕ್ಷೇತ್ರವು ಶಿಕ್ಷಣ ಪಡೆದ ಯುವಜನರು, ಉದ್ಯೋಗಾಕಾಂಕ್ಷಿಗಳು ಹಾಗೂ ವಿವಿಧ ವೃತ್ತಿಗಳಲ್ಲಿ



ತೊಡಗಿಸಿಕೊಂಡಿರುವವರ ಸಮಸ್ಯೆಗಳನ್ನು ಪ್ರತಿನಿಧಿಸುವ ಮಹತ್ವದ ಕ್ಷೇತ್ರವಾಗಿದೆ. ಪದವೀಧರರು ಎದುರಿಸುತ್ತಿರುವ ಸವಾಲುಗಳು, ಉದ್ಯೋಗಾವಕಾಶಗಳ ಅಗತ್ಯ, ಅವರ ಹಕ್ಕುಗಳ ರಕ್ಷಣೆ ಹಾಗೂ ವೃತ್ತಿಪರ ಹಿತಾಸಕ್ತಿಗಳಿಗೆ ಸೂಕ್ತ ಪ್ರಾತಿನಿಧ್ಯ ದೊರೆಯಬೇಕಿದೆ. ಈ ನಿಟ್ಟಿನಲ್ಲಿ ವಿಧಾನ ಪರಿಷತ್‌ನಲ್ಲಿ ಪದವೀಧರರ ಪರವಾಗಿ ಸಮರ್ಥವಾಗಿ ಕಾರ್ಯನಿರ್ವಹಿಸುವ ಅಭ್ಯರ್ಥಿಯನ್ನು ಆಯ್ಕೆ ಮಾಡುವುದು ಮತದಾರರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರ ಗೆಲುವಿಗೆ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು. ಪಕ್ಷದ ಸಂಘಟನೆ ಬಲಪಡಿಸುವುದರ ಜೊತೆಗೆ ಪದವೀಧರ ಮತದಾರರನ್ನು ನೇರವಾಗಿ ಸಂಪರ್ಕಿಸಿ, ಅಭ್ಯರ್ಥಿಯ ಪರವಾಗಿ ಮತಯಾಚನೆ ಮಾಡಬೇಕು. ಚುನಾವಣೆಯಲ್ಲಿ ಸಂಘಟಿತ ಪ್ರಯತ್ನದ ಮೂಲಕ ಉತ್ತಮ ಫಲಿತಾಂಶ ಸಾಧಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಸಭೆಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಪದವೀಧರ ಮತದಾರರೊಂದಿಗೆ ಸಮಾಲೋಚನೆ ನಡೆಸಿದ ಸಚಿವರು, ಚುನಾವಣಾ ಕಾರ್ಯತಂತ್ರ ಮತ್ತು ಅಭ್ಯರ್ಥಿಯ ಪರವಾಗಿ ಬೆಂಬಲ ಕ್ರೋಢೀಕರಿಸುವ ಕುರಿತು ಚರ್ಚಿಸಿದರು. ಪದವೀಧರ ಮತದಾರರು ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡುವ ಮೂಲಕ ಅವರ ಗೆಲುವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅಭ್ಯರ್ಥಿಯ ಪರವಾಗಿ ಮತಯಾಚನೆ ನಡೆಸುತ್ತಿರುವುದು ಚುನಾವಣಾ ಚಟುವಟಿಕೆಗಳಿಗೆ ಮತ್ತಷ್ಟು ವೇಗ ನೀಡಿದೆ. ಪದವೀಧರ ಮತದಾರರನ್ನು ತಲುಪುವುದು, ಅವರ ನಿರೀಕ್ಷೆಗಳನ್ನು ಆಲಿಸುವುದು ಹಾಗೂ ಅಭ್ಯರ್ಥಿಯ ಪರವಾಗಿ ಬೆಂಬಲ ಸಂಗ್ರಹಿಸುವ ನಿಟ್ಟಿನಲ್ಲಿ ಪಕ್ಷದ ಮುಖಂಡರು ಕಾರ್ಯಪ್ರವೃತ್ತರಾಗಿದ್ದಾರೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು, ಪದವೀಧರ ಮತದಾರರು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಆರ್. ಅಶೋಕ್ ದಿಢೀರ್ ಭೇಟಿ
## ವಿದ್ಯಾರ್ಥಿನಿಯರ ಸಮಸ್ಯೆಗಳಿಗೆ ಸ್ಪಂದನೆ; ಆಹಾರದ ಗುಣಮಟ್ಟ, ಸ್ವಚ್ಛತೆ ಮತ್ತು ಮೂಲಸೌಕರ್ಯಗಳ ಪರಿಶೀಲನೆ

**"ಮುಂಜಾನೆಯ ಮೆರಗು"**

**ಬೆಂಗಳೂರು ಅ, 12–** ವಿದ್ಯಾರ್ಥಿನಿಯರಿಗೆ ವಸತಿ ನಿಲಯಗಳಲ್ಲಿ ಗುಣಮಟ್ಟದ ಆಹಾರ, ಸುರಕ್ಷಿತ ವಾತಾವರಣ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿ ದೊರೆಯಬೇಕು ಎಂಬ ನಿಟ್ಟಿನಲ್ಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಪದ್ಮನಾಭನಗರ ವಿಧಾನಸಭಾ ಕ್ಷೇತ್ರದ ಜಯನಗರ 7ನೇ ಬ್ಲಾಕ್‌ನಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಅಧೀನದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಕಾಲೇಜು ಬಾಲಕಿಯರ ವಿದ್ಯಾರ್ಥಿನಿಲಯ–01ಕ್ಕೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿದ ಅವರು, ಅಲ್ಲಿನ ವ್ಯವಸ್ಥೆಗಳ ಕುರಿತು ಮಾಹಿತಿ ಪಡೆದು, ವಿದ್ಯಾರ್ಥಿನಿಯರೊಂದಿಗೆ ನೇರವಾಗಿ ಸಂವಾದ ನಡೆಸಿದರು. ವಿದ್ಯಾರ್ಥಿನಿಯರು ಎದುರಿಸುತ್ತಿರುವ ಸಮಸ್ಯೆಗಳು, ದೈನಂದಿನ ವಸತಿ ವ್ಯವಸ್ಥೆ, ಆಹಾರದ ಗುಣಮಟ್ಟ ಹಾಗೂ ಇತರ ಅಗತ್ಯ ಸೌಲಭ್ಯಗಳ ಕುರಿತು ವಿಚಾರಿಸಿದರು. ವಿದ್ಯಾರ್ಥಿನಿಯರು ತಮ್ಮ ಕುಂದುಕೊರತೆಗಳನ್ನು ಮುಕ್ತವಾಗಿ



ಹಂಚಿಕೊಳ್ಳಲು ಅವಕಾಶ ಮಾಡಿಕೊಟ್ಟು, ಅವುಗಳ ಪರಿಹಾರಕ್ಕೆ ಗಮನಹರಿಸಿದರು.

**ಆಹಾರದ ಗುಣಮಟ್ಟಕ್ಕೆ ಆದ್ಯತೆ**

ವಿದ್ಯಾರ್ಥಿನಿಲಯಗಳಲ್ಲಿ ವಾಸಿಸುವ ವಿದ್ಯಾರ್ಥಿನಿಯರ ಆರೋಗ್ಯ ಮತ್ತು ಶೈಕ್ಷಣಿಕ ಪ್ರಗತಿಯಲ್ಲಿ ಆಹಾರದ ಗುಣಮಟ್ಟ ಪ್ರಮುಖ ಪಾತ್ರ ವಹಿಸುತ್ತದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯರಿಗೆ ನೀಡಲಾಗುತ್ತಿರುವ ಊಟದ ವ್ಯವಸ್ಥೆ, ಆಹಾರದ ಗುಣಮಟ್ಟ ಹಾಗೂ ಅಡುಗೆ ಮತ್ತು ಊಟದ ವ್ಯವಸ್ಥೆಗೆ ಸಂಬಂಧಿಸಿದ ಸೌಲಭ್ಯಗಳ ಕುರಿತು ಪರಿಶೀಲನೆ ನಡೆಸಲಾಯಿತು.

ವಿದ್ಯಾರ್ಥಿನಿಯರಿಗೆ ಸಮರ್ಪಕವಾದ ಆಹಾರ ದೊರೆಯುವುದರ ಜತೆಗೆ, ವಸತಿ ನಿಲಯದ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯಗಳು ಮತ್ತು ಇತರ ಮೂಲಭೂತ ಸೌಕರ್ಯಗಳ ನಿರ್ವಹಣೆಗೂ ಆದ್ಯತೆ ನೀಡಬೇಕಾಗಿದೆ. ವಿದ್ಯಾರ್ಥಿನಿಯರ ದೈನಂದಿನ ಅಗತ್ಯಗಳಿಗೆ ಅನುಗುಣವಾಗಿ ಸೌಲಭ್ಯಗಳನ್ನು ಕಲ್ಪಿಸುವುದು ಸಂಬಂಧಪಟ್ಟ ಇಲಾಖೆಯ ಜವಾಬ್ದಾರಿಯಾಗಿದೆ ಎಂಬುದನ್ನು ಈ ಸಂದರ್ಭದಲ್ಲಿ ಒತ್ತಿಹೇಳಲಾಯಿತು.

**ವಿದ್ಯಾರ್ಥಿನಿಯರೊಂದಿಗೆ ನೇರ ಸಂವಾದ**

ವಿದ್ಯಾರ್ಥಿನಿಲಯದ ವ್ಯವಸ್ಥೆಗಳ ಕುರಿತು ಅಧಿಕಾರಿಗಳು ನೀಡುವ ಮಾಹಿತಿಯ ಜತೆಗೆ, ಅಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿನಿಯರ ಅನುಭವ ಮತ್ತು ಅಭಿಪ್ರಾಯಗಳನ್ನು ಆಲಿಸುವ ಉದ್ದೇಶದಿಂದ ಆರ್. ಅಶೋಕ್ ಅವರು ಸಂವಾದ ನಡೆಸಿದರು. ವಿದ್ಯಾರ್ಥಿನಿಯರ ಕುಂದುಕೊರತೆಗಳನ್ನು ಆಲಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳ ಬಗ್ಗೆ ಗಮನಹರಿಸಿದರು.

ಸರ್ಕಾರಿ ವಿದ್ಯಾರ್ಥಿನಿಲಯಗಳು ಆರ್ಥಿಕವಾಗಿ ಹಿಂದುಳಿದ ಹಾಗೂ ವಿವಿಧ ಸಾಮಾಜಿಕ ಹಿನ್ನೆಲೆಯ ವಿದ್ಯಾರ್ಥಿನಿಯರಿಗೆ ಶಿಕ್ಷಣ ಮುಂದುವರಿಸಲು ನೆರವಾಗುವ ಪ್ರಮುಖ ವ್ಯವಸ್ಥೆಗಳಾಗಿವೆ. ಆದ್ದ–ರಿಂದ ವಿದ್ಯಾರ್ಥಿನಿಯರಿಗೆ ಉತ್ತಮ ವಸತಿ ಸೌಲಭ್ಯ, ಗುಣಮಟ್ಟದ ಆಹಾರ ಮತ್ತು ಓದಿಗೆ ಪೂರಕವಾದ ವಾತಾವರಣ ದೊರೆಯುವಂತೆ ನೋಡಿಕೊಳ್ಳುವುದು ಅಗತ್ಯವಾಗಿದೆ.

**ಮೂಲಸೌಕರ್ಯ ಸುಧಾರಣೆಗೆ ಒತ್ತು**

ವಿದ್ಯಾರ್ಥಿನಿಯರ ಶಿಕ್ಷಣ–



ಕ್ಕೆ ಯಾವುದೇ ರೀತಿಯ ತೊಂದರೆ–ಯಾಗದಂತೆ ವಿದ್ಯಾರ್ಥಿನಿಲಯಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ವಿದ್ಯಾರ್ಥಿನಿಯರು ಎದುರಿಸುವ ಸಮಸ್ಯೆಗಳನ್ನು ನಿರ್ಲಕ್ಷಿಸದೆ, ಅವುಗಳಿಗೆ ಕಾಲಮಿತಿಯೊಳಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂಬ ಆಶಯ ವ್ಯಕ್ತವಾಯಿತು.

ವಿದ್ಯಾರ್ಥಿನಿಯರ ಹಿತಾಸಕ್ತಿ, ಆರೋಗ್ಯ, ಸುರಕ್ಷತೆ ಮತ್ತು ಶೈಕ್ಷಣಿಕ ಪ್ರಗತಿಯನ್ನು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿನಿಲಯದ ವ್ಯವಸ್ಥೆಗಳನ್ನು ಸುಧಾರಿಸುವುದು ಮುಖ್ಯವಾಗಿದೆ. ಆರ್. ಅಶೋಕ್ ಅವರ ಈ ದಿಢೀರ್ ಭೇಟಿ ವಿದ್ಯಾರ್ಥಿನಿಲಯದ ಸೌಲಭ್ಯಗಳ ಪರಿಶೀಲನೆ ಹಾಗೂ ವಿದ್ಯಾರ್ಥಿನಿಯರ ಕುಂದುಕೊರತೆಗಳನ್ನು ಆಲಿಸುವ ದೃಷ್ಟಿಯಿಂದ ಮಹತ್ವ ಪಡೆದಿದೆ.

ಈ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಉತ್ತಮ ವಾತಾವರಣ, ಗುಣಮಟ್ಟದ ಆಹಾರ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಆದ್ಯತೆಯಾಗಬೇಕು ಎಂಬ ನಿಲುವನ್ನು ವ್ಯಕ್ತಪಡಿಸಲಾಯಿತು.

# ವಿದ್ಯುತ್ ಮೋಟಾರ್ ರೀವೈಂಡಿಂಗ್ ಹಾಗೂ ಫಾಸ್ಟ್ ಫುಡ್ ತರಬೇತಿಗಾಗಿ ಅರ್ಜಿ ಆಹ್ವಾನ

**"ಮುಂಜಾನೆಯ ಮೆರಗು"**

**ದಾವಣಗ

## ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಪರ ಆರ್. ಅಶೋಕ್ ಮತಯಾಚನೆ



"ಮುಂಜಾನೆಯ ಮೆರಗು"

**ಬೆಂಗಳೂರು ಅ, 12–** ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ, ಪದ್ಮನಾಭನಗರ ವಿಧಾನಸಭಾ ಕ್ಷೇತ್ರದ ವಿವಿಧ ಶಾಲಾ–ಕಾಲೇಜುಗಳಿಗೆ ಭೇಟಿ ನೀಡಿದ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು, ಎನ್‌ಡಿಎ ಅಭ್ಯರ್ಥಿ ಎ.ಪಿ. ರಂಗನಾಥ್ ಅವರ ಪರವಾಗಿ ಶಿಕ್ಷಕರಲ್ಲಿ ಮತಯಾಚಿಸಿದರು.

ಕ್ಷೇತ್ರದ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿದ ಆರ್. ಅಶೋಕ್ ಅವರು, ಶಿಕ್ಷಕರೊಂದಿಗೆ ಸಂವಾದ ನಡೆಸಿ ಚುನಾವಣೆಗೆ ಸಂಬಂಧಿಸಿದಂತೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಎನ್‌ಡಿಎ ಅಭ್ಯರ್ಥಿ ಎ.ಪಿ. ರಂಗನಾಥ್ ಅವರಿಗೆ ಬೆಂಬಲ ನೀಡುವಂತೆ ಶಿಕ್ಷಕರಲ್ಲಿ ಮನವಿ ಮಾಡಿದರು.

ಶಿಕ್ಷಕರ ಸಮಸ್ಯೆಗಳು, ಅವರ ಬೇಡಿಕೆಗಳು ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಕುರಿತು ಶಿಕ್ಷಕರೊಂದಿಗೆ ಚರ್ಚೆ ನಡೆಸಿ, ಚುನಾವಣೆಯಲ್ಲಿ ಅಭ್ಯರ್ಥಿಯ ಗೆಲುವಿಗೆ ಸಹಕರಿಸುವಂತೆ ಕೋರಿದರು.

ಈ ಮೂಲಕ ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿಯ ಪರವಾಗಿ ಚುನಾವಣಾ ಪ್ರಚಾರಕ್ಕೆ ಮತ್ತಷ್ಟು ವೇಗ ನೀಡಲಾಯಿತು.

## ಕೊಪ್ಪಳ ಜಿಲ್ಲೆಯ ಹಲವು ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿಗೆ ಸೇರ್ಪಡೆ





"ಮುಂಜಾನೆಯ ಮೆರಗು"

**ಬೆಂಗಳೂರು ಅ, 12–** ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಯಡಿಯೂರಪ್ಪ ಅವರ ಸಮ್ಮುಖದಲ್ಲಿ ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಕೊಪ್ಪಳ ಜಿಲ್ಲೆಯ ಮುಖಂಡ ಶಂಭುಲಿಂಗ ಗೌಡ ಪಾಟೀಲ್ ಅವರ ನೇತೃತ್ವದಲ್ಲಿ ಅನೇಕ ಕಾಂಗ್ರೆಸ್ ಕಾರ್ಯಕರ್ತರು ಪಕ್ಷ ತೊರೆದು ಬಿಜೆಪಿಗೆ ಸೇರ್ಪಡೆಗೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ಪಕ್ಷದ ಸಿದ್ಧಾಂತ ಹಾಗೂ ಸಂಘಟನಾ ಕಾರ್ಯಗಳಿಗೆ ಬೆಂಬಲ ವ್ಯಕ್ತಪಡಿಸಿ ಬಿಜೆಪಿಗೆ ಸೇರ್ಪಡೆಯಾಗುತ್ತಿರುವ ಕಾರ್ಯಕರ್ತರನ್ನು ಸ್ವಾಗತಿಸಿದರು ಎಂದು ಪಕ್ಷದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ, ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಎಚ್. ಪಾಟೀಲ್, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಮಾಜಿ ಸಚಿವರಾದ ಹಾಲಪ್ಪ ಆಚಾರ್ ಹಾಗೂ ಎಂ.ಪಿ. ರೇಣುಕಾಚಾರ್ಯ, ಮಾಜಿ ಶಾಸಕ ಪರಣ್ಣ ಮುನವಳ್ಳಿ, ವಿಧಾನ ಪರಿಷತ್ ಸದಸ್ಯ ಹೇಮಲತಾ ನಾಯಕ್, ಕೊಪ್ಪಳ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣನವರ್, ಮುಖಂಡ ಡಾ. ಬಸವರಾಜ್ ಕ್ಯಾವಟರ್ ಸೇರಿದಂತೆ ಪಕ್ಷದ ಪ್ರಮುಖರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆ: ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಪರ ಶಾಸಕ ಬಿ.ಪಿ. ಹರೀಶ್ ಮತಯಾಚನೆ



"ಮುಂಜಾನೆಯ ಮೆರಗು"

**ಹರಿಹರ ಅ, 12–** ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರ ಪರವಾಗಿ ಹರಿಹರ ಶಾಸಕ ಬಿ.ಪಿ. ಹರೀಶ್ ಅವರು ತಾಲೂಕಿನ ಕೊಮಾರನಹಳ್ಳಿ ಗ್ರಾಮದಲ್ಲಿ ಮತಯಾಚನೆ ನಡೆಸಿ ಚುನಾವಣಾ ಪ್ರಚಾರ ಕೈಗೊಂಡರು.

ಗ್ರಾಮದಲ್ಲಿ ಮತದಾರರನ್ನು ಭೇಟಿಯಾದ ಶಾಸಕ ಬಿ.ಪಿ. ಹರೀಶ್ ಅವರು, ಅಭ್ಯರ್ಥಿ ಕೆ.ಎಂ. ಸುರೇಶ್ ಅವರ ಪರವಾಗಿ ಬೆಂಬಲ ಕೋರಿ, ಪದವೀಧರ ಮತದಾರರು ಚುನಾವಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

## ವಿಕಲಚೇತನರ ರಾಜ್ಯಮಟ್ಟದ ಸಮಾವೇಶಕ್ಕೆ ಸಚಿವ ಟಿ.ರಘುಮೂರ್ತಿಗೆ ಆಹ್ವಾನ



"ಮುಂಜಾನೆಯ ಮೆರಗು"

**ಚಿತ್ರದುರ್ಗ ಅ, 12–** ಶರಣ ಸಂಸ್ಕೃತಿ ಉತ್ಸವದ ಪ್ರಯುಕ್ತ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಸಹಕಾರದೊಂದಿಗೆ ಅ.19ರಂದು ನಗರದ ಅನುಭವ ಮಂಟಪದಲ್ಲಿ ವಿಕಲಚೇತನರ ರಾಜ್ಯಮಟ್ಟದ ಸಮಾವೇಶ ಆಯೋಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಕಲಚೇತನರ ಅಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಮಹಾಂತೇಶ್ ಬ್ರಹ್ಮ ಅವರು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ.ರಘುಮೂರ್ತಿ ಅವರನ್ನು ಭೇಟಿ ಮಾಡಿ, ಸಮಾವೇಶಕ್ಕೆ ಆಹ್ವಾನ ನೀಡಿದರು.

ವಿಕಲಚೇತನರ ಮಾಸಾಶನ ಹೆಚ್ಚಳ, ರಾಜ್ಯಾದ್ಯಂತ ಉಚಿತ ಬಸ್‌ಪಾಸ್ ಸೌಲಭ್ಯ, ವಿಕಲಚೇತನರಿಗಾಗಿ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪನೆ ಸೇರಿದಂತೆ ಒಟ್ಟು 10 ಸಂವಿಧಾನಬದ್ಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ವಿಕಲಚೇತನರು ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಸಚಿವ ಟಿ.ರಘುಮೂರ್ತಿ ಅವರು ಸಮಾವೇಶವನ್ನು ಉದ್ಘಾಟಿಸಿ, ವಿಕಲಚೇತನರ ಬೇಡಿಕೆಗಳ ಮನವಿ ಸ್ವೀಕರಿಸಬೇಕು. ಬಳಿಕ ಬೇಡಿಕೆಗಳನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಶಿಫಾರಸು ಮಾಡುವ ಮೂಲಕ ಈಡೇರಿಕೆಗೆ ಸಹಕರಿಸಬೇಕು ಎಂದು ಮಹಾಂತೇಶ್ ಬ್ರಹ್ಮ ಮನವಿ ಮಾಡಿದರು.

## ಶಿವಮೊಗ್ಗದಲ್ಲಿ ಬಿಎಸ್‌ಸಿ ಟೆಕ್ಸ್‌ಟೈಲ್ಸ್ ಬೃಹತ್ ಮಳಿಗೆ ಉದ್ಘಾಟನೆ



"ಮುಂಜಾನೆಯ ಮೆರಗು"

**ಶಿವಮೊಗ್ಗ ಅ, 12–** ನಗರದ ಬಿ.ಎಚ್. ರಸ್ತೆಯಲ್ಲಿ ನಿರ್ಮಾಣಗೊಂಡಿರುವ ಬಿಎಸ್‌ಸಿ ಟೆಕ್ಸ್‌ಟೈಲ್ಸ್‌ನ ನೂತನ ಬೃಹತ್ ಮಳಿಗೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಕೇಂದ್ರ ಸಚಿವ ವಿ. ಸೋಮಣ್ಣ ಅವರೊಂದಿಗೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಉದ್ಘಾಟನಾ ಸಮಾರಂಭದಲ್ಲಿ ಹಿರಿಯ ಮುಖಂಡ ಕೆ.ಎಸ್. ಈಶ್ವರಪ್ಪ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಆರಗ ಜ್ಞಾನೇಂದ್ರ, ಶಾಸಕರಾದ ಚನ್ನಬಸಪ್ಪ, ಡಿ.ಎಸ್. ಅರುಣ್ ಸೇರಿದಂತೆ ಹಲವು ಜನಪ್ರತಿನಿಧಿಗಳು, ಗಣ್ಯರು ಹಾಗೂ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

**88 ವರ್ಷಗಳ ಪರಂಪರೆ, ಗ್ರಾಹಕರ ವಿಶ್ವಾಸವೇ ಬಲ**

ಸುಮಾರು 88 ವರ್ಷಗಳ ಸುದೀರ್ಘ ಇತಿಹಾಸ ಮತ್ತು ವಿಶ್ವಾಸಾರ್ಹ ಪರಂಪರೆಯನ್ನು ಹೊಂದಿರುವ ಬಿಎಸ್‌ಸಿ ಸಂಸ್ಥೆಯು ಇದೀಗ ಶಿವಮೊಗ್ಗ ನಗರದಲ್ಲಿ ತನ್ನ ಬೃಹತ್ ಮಳಿಗೆಯನ್ನು ಆರಂಭಿಸುವ ಮೂಲಕ ಗ್ರಾಹಕರಿಗೆ ಒಂದೇ ಸೂರಿನಡಿ ವಿವಿಧ ವಿನ್ಯಾಸಗಳ ಉಡುಪುಗಳು ಹಾಗೂ ಗೃಹಾಲಂಕಾರಕ್ಕೆ ಪೂರಕವಾದ ಹೋಮ್ ಫರ್ನಿಷಿಂಗ್ ಉತ್ಪನ್ನಗಳ ವಿಶಾಲ ಸಂಗ್ರಹವನ್ನು ಒದಗಿಸಲು ಮುಂದಾಗಿದೆ.

ನಗರದ ಪ್ರಮುಖ ವಾಣಿಜ್ಯ ಕೇಂದ್ರವಾದ ಬಿ.ಎಚ್. ರಸ್ತೆಯಲ್ಲಿ ಆರಂಭಗೊಂಡಿರುವ ಈ ಮಳಿಗೆಯು ಶಿವಮೊಗ್ಗದ ಜಿಲ್ಲೆರೆ ವ್ಯಾಪಾರ ಕ್ಷೇತ್ರಕ್ಕೆ ಮತ್ತಷ್ಟು ಚೈತನ್ಯ ನೀಡುವ ನಿರೀಕ್ಷೆಯಿದೆ. ಗ್ರಾಹಕರಿಗೆ ಗುಣಮಟ್ಟದ ಉತ್ಪನ್ನಗಳನ್ನು ಒದಗಿಸುವುದರ ಜೊತೆಗೆ ಸ್ಥಳೀಯವಾಗಿ ಉದ್ಯೋಗಾವಕಾಶಗಳ ಸೃಷ್ಟಿಗೂ ಸಹಕಾರಿಯಾಗಲಿದೆ ಎಂಬ ಆಶಯ ವ್ಯಕ್ತವಾಗಿದೆ.

ಶಿವಮೊಗ್ಗದ ಜನತೆಗೆ ಆಧುನಿಕ ಶೈಲಿಯ ಉಡುಪುಗಳು ಹಾಗೂ ವಿವಿಧ ಗೃಹೋಪಯೋಗಿ ಬಟ್ಟೆ ಉತ್ಪನ್ನಗಳನ್ನು ಒಂದೇ ಸ್ಥಳದಲ್ಲಿ ಆಯ್ಕೆ ಮಾಡಿಕೊಳ್ಳಲು ಅನುಕೂಲವಾಗುವಂತೆ ನೂತನ ಮಳಿಗೆಯನ್ನು ರೂಪಿಸಲಾಗಿದೆ.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ, ಸಿಬ್ಬಂದಿ ವರ್ಗ ಹಾಗೂ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಗ್ರಾಹಕರಿಗೆ ಶುಭಾಶಯಗಳನ್ನು ತಿಳಿಸಲಾಯಿತು. ಬಿಎಸ್‌ಸಿ ಟೆಕ್ಸ್‌ಟೈಲ್ಸ್ ಸಂಸ್ಥೆಯು ಮುಂದಿನ ದಿನಗಳಲ್ಲಿಯೂ ಗ್ರಾಹಕರ ವಿಶ್ವಾಸವನ್ನು ಉಳಿಸಿಕೊಂಡು, ತನ್ನ ಸೇವಾ ವಿಸ್ತರಣೆಯ ಮೂಲಕ ವಾಣಿಜ್ಯ ಕ್ಷೇತ್ರದಲ್ಲಿ ಮತ್ತಷ್ಟು ಪ್ರಗತಿ ಸಾಧಿಸಲಿ ಎಂಬ ಹಾರೈಕೆ ವ್ಯಕ್ತವಾಯಿತು.

## ಕಾಂಗ್ರೆಸ್ ಸರ್ಕಾರದ ಜನವಿರೋಧಿ ಆಡಳಿತಕ್ಕೆ ಪದವೀಧರರು ತಕ್ಕ ಪಾಠ ಕಲಿಸಲಿದ್ದಾರೆ: ಸಿ.ಟಿ. ರವಿ
## ಶ್ರೀನಿವಾಸಪುರದಲ್ಲಿ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಪರ ಮತಯಾಚನೆ



"ಮುಂಜಾನೆಯ ಮೆರಗು"

**ಶ್ರೀನಿವಾಸಪುರ ಅ, 12–** ದೇಶದ ಅಭಿವೃದ್ಧಿ, 'ರಾಷ್ಟ್ರ ಮೊದಲು' ಎಂಬ ಸಿದ್ಧಾಂತ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಎನ್‌ಡಿಎ ಮೈತ್ರಿಕೂಟದ ಪ್ರಮುಖ ಶಕ್ತಿಯಾಗಿವೆ ಎಂದು ಬಿಜೆಪಿ ಮುಖಂಡ ಸಿ.ಟಿ. ರವಿ ಹೇಳಿದರು.

ಆಗ್ನೇಯ ಪದವೀಧರರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಕೆ.ಎಂ. ಸುರೇಶ್ ಅವರ ಪರವಾಗಿ ಶ್ರೀನಿವಾಸಪುರದಲ್ಲಿ ಆಯೋಜಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು ಅವರು ಮತಯಾಚಿಸಿ ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ಅಭಿವೃದ್ಧಿ ಹಾಗೂ ಜನಸೇವೆಗೆ ಆದ್ಯತೆ ನೀಡಲಾಗುತ್ತಿದೆ. ರಾಷ್ಟ್ರದ ಹಿತಾಸಕ್ತಿಯನ್ನು ಕೇಂದ್ರವಾಗಿಟ್ಟುಕೊಂಡು ಕಾರ್ಯನಿರ್ವಹಿಸುವುದು ಎನ್‌ಡಿಎ ಮೈತ್ರಿಕೂಟದ ಮೂಲ ಉದ್ದೇಶವಾಗಿದೆ ಎಂದು ತಿಳಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತವನ್ನು ಟೀಕಿಸಿದ ಅವರು, ಗ್ಯಾರಂಟಿ ಯೋಜನೆಗಳ ಭರವಸೆಯೊಂದಿಗೆ ಅಧಿಕಾರಕ್ಕೆ ಬಂದಿರುವ ಸರ್ಕಾರವು ರೈತರ ಬೆಳೆಗಳ ಹಣ ಪಾವತಿ, ಹಾಲಿನ ಸಬ್ಸಿಡಿ ಹಾಗೂ ವೃದ್ಧರು ಮತ್ತು ಅಂಗವಿಕಲರ ಪಿಂಚಣಿ ಸೇರಿದಂತೆ ಹಲವು ವಿಚಾರಗಳಲ್ಲಿ ಜನರಿಗೆ ತೊಂದರೆ ಉಂಟುಮಾಡುತ್ತಿದೆ ಎಂದು ಆರೋಪಿಸಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ನೋಂದಣಿ ಶುಲ್ಕಗಳ ಹೆಚ್ಚಳದಿಂದ ಜನಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ. ರಾಜ್ಯ ಸರ್ಕಾರದ ಆಡಳಿತ ವೈಖರಿಯ ಬಗ್ಗೆ ಜನರಲ್ಲಿ ಅಸಮಾಧಾನವಿದ್ದು, ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಮತದಾರರು ತಮ್ಮ ಮತದಾನದ ಮೂಲಕ ಸೂಕ್ತ ಉತ್ತರ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಆಗ್ನೇಯ ಪದವೀಧರರ ಕ್ಷೇತ್ರದ ಅಭಿವೃದ್ಧಿ, ಪದವೀಧರರ ಸಮಸ್ಯೆಗಳ ಪರಿಹಾರ ಹಾಗೂ ಅವರ ಹಿತಾಸಕ್ತಿಗಳ ರಕ್ಷಣೆಗೆ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರನ್ನು ಬೆಂಬಲಿಸುವಂತೆ ಪದವೀಧರ ಮತದಾರರಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಬಿಜೆಪಿ ಸಹ ಉಸ್ತುವಾರಿಗಳಾದ ಡಾ. ಕಾಸಂ ವೆಂಕಟೇಶ್ವರಲು, ಶಾಸಕರಾದ ಜಿ.ಕೆ. ವೆಂಕಟಶಿವಾರೆಡ್ಡಿ ಮತ್ತು ಎಸ್.ಎನ್. ನಾರಾಯಣಸ್ವಾಮಿ, ಬಿಜೆಪಿ ಕೋಲಾರ ಜಿಲ್ಲಾಧ್ಯಕ್ಷ ಓಂ ಶಕ್ತಿ ಚಲಪತಿ, ಸಂಸದ ಎಂ. ಮಲ್ಲೇಶ್ ಬಾಬು, ಮುಖಂಡರಾದ ಬಿ.ಪಿ. ವೆಂಕಟಮುನಿಯಪ್ಪ, ಮಾಜಿ ವಿಧಾನ ಪರಿಷತ್ ಸದಸ್ಯ ಆರ್. ಚೌಡರೆಡ್ಡಿ ತೂಪಲ್ಲಿ, ಬಿಜೆಪಿ ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಬ್ಯಾಟರಂಗೇಗೌಡ ಸೇರಿದಂತೆ ಎನ್‌ಡಿಎ ಮೈತ್ರಿಕೂಟದ ಹಲವು ಪ್ರಮುಖ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಎಚ್‌ಎಂಟಿ ಕಾರ್ಖಾನೆಯ ಪ್ರಗತಿ ಪರಿಶೀಲಿಸಿದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
## ಆತ್ಮನಿರ್ಭರ ಭಾರತ, ಮೇಕ್ ಇನ್ ಇಂಡಿಯಾ ಪರಿಕಲ್ಪನೆಗಳಿಗೆ ಒತ್ತು



"ಮುಂಜಾನೆಯ ಮೆರಗು"

**ಬೆಂಗಳೂರು ಅ, 12–** ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾ ಪರಿಕಲ್ಪನೆಗಳ ಮಾರ್ಗದರ್ಶನದಲ್ಲಿ ವಿಕಸಿತ ಭಾರತ–2047ರ ಕನಸನ್ನು ಸಾಕಾರಗೊಳಿಸಲು ನಿರಂತರವಾಗಿ ಶ್ರಮಿಸಲಾಗುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

ಇದರ ಭಾಗವಾಗಿ ಬೆಂಗಳೂರಿನಲ್ಲಿ ಹಿಂದೂಸ್ತಾನ್ ಮಷಿನ್ ಟೂಲ್ಸ್ (ಎಚ್–ಎಂಟಿ) ಕಾರ್ಖಾನೆಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ಸಂಸ್ಥೆಯ ಪ್ರಸ್ತುತ ಸ್ಥಿತಿಗತಿ ಹಾಗೂ ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ವಿಸ್ತೃತ ಚರ್ಚೆ ನಡೆಸಿದರು.

ಎಚ್‌ಎಂಟಿ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಎನ್. ರಮೇಶ್ ಕುಮಾರ್ ಸೇರಿದಂತೆ ಕಂಪನಿಯ ಉನ್ನತ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಸಂಸ್ಥೆಯ ಕಾರ್ಯನಿರ್ವಹಣೆ, ಪ್ರಸ್ತುತ ಪ್ರಗತಿ, ಎದುರಿಸುತ್ತಿರುವ ಸವಾಲುಗಳು ಹಾಗೂ ಭವಿಷ್ಯದ ಕಾರ್ಯಯೋಜನೆಗೆ ಸಂಬಂಧಿಸಿದಂತೆ ಅಧಿಕಾರಿಗಳಿಂದ ಸವಿವರ ಸಮಗ್ರ ಮಾಹಿತಿ ಪಡೆದು–ಕೊಂಡರು.

ದೇಶದ ಕೈಗಾರಿಕಾ ಅಭಿವೃದ್ಧಿ, ಉತ್ಪಾದನಾ ವಲಯದ ಬಲವರ್ಧನೆ ಹಾಗೂ ಸ್ವದೇಶಿ ಉತ್ಪಾದನೆಗೆ ಉತ್ತೇಜನ ನೀಡುವ ಉದ್ದೇಶದಿಂದ ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾ ಪರಿಕಲ್ಪನೆಗಳಿಗೆ ಮಹತ್ವ ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಎಚ್‌ಎಂಟಿ ಸಂಸ್ಥೆಯ ಪ್ರಸ್ತುತ ಸ್ಥಿತಿಯನ್ನು ಪರಿಶೀಲಿಸಿ, ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚೆ ನಡೆಸಲಾಯಿತು.

ದೇಶದ ಕೈಗಾರಿಕಾ ಸಾಮರ್ಥ್ಯವನ್ನು ವೃದ್ಧಿಸುವ ಮತ್ತು ಉತ್ಪಾದನಾ ವಲಯದ ಬೆಳವಣಿಗೆಗೆ ಪೂರಕವಾದ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಸಂಸ್ಥೆಯ ಪ್ರಗತಿ ಪರಿಶೀಲನೆ ಮಹತ್ವ ಪಡೆದಿದೆ.

## ಮಳೆ ಕೊರತೆಯಿಂದ ಜೋಳದ ಬೆಳೆ ನಾಶ: ರೈತರ ಕಣ್ಣೀರು ನೋಡಲಾಗುತ್ತಿಲ್ಲ: ನಿಖಿಲ್ ಕುಮಾರಸ್ವಾಮಿ
## ರೈತ ಸ್ವಾಭಿಮಾನ ಯಾತ್ರೆಯಲ್ಲಿ ಸಂಕಷ್ಟದಲ್ಲಿರುವ ಅನ್ನದಾತರ ಅಳಲು ಆಲಿಸಿದ ಜೆಡಿಎಸ್ ಯುವ ರಾಜ್ಯಾಧ್ಯಕ್ಷ



"ಮುಂಜಾನೆಯ ಮೆರಗು"

**ಶಿವಮೊಗ್ಗ ಅ, 12–** ಮಳೆ ಕೊರತೆಯಿಂದ ಜೋಳದ ಬೆಳೆ ಸಂಪೂರ್ಣ ಒಣಗಿ ನಾಶವಾಗಿದ್ದು, ಲಕ್ಷಾಂತರ ರೂಪಾಯಿ ಸಾಲ ಮಾಡಿ ಕೃಷಿ ಮಾಡಿದ ರೈತರು ಕಂಗಾಲಾಗಿದ್ದಾರೆ. ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿರುವ ಅನ್ನದಾತರ ಸಂಕಷ್ಟ ಮತ್ತು ಕಣ್ಣೀರು ನೋಡಲಾಗುತ್ತಿಲ್ಲ ಎಂದು ಜೆಡಿಎಸ್ ಯುವ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಭಾವುಕರಾಗಿ ಹೇಳಿದರು.

ರೈತ ಸ್ವಾಭಿಮಾನ ಯಾತ್ರೆಯ ಅಂಗವಾಗಿ ಶಿವಮೊಗ್ಗ ಗ್ರಾಮಾಂತರ ಪ್ರದೇಶಕ್ಕೆ ಭೇಟಿ ನೀಡಿದ ಅವರು, ಅಲ್ಲಿನ ರೈತರಾದ ಇಸ್ಮಾಯಿಲ್ ಮತ್ತು ರಮೇಶ್ ಅವರ ಜೋಳದ ಹೊಲಗಳನ್ನು ವೀಕ್ಷಿಸಿ ಬೆಳೆ ನಷ್ಟದ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಮಳೆ ಇಲ್ಲದೆ ಜೋಳದ ಬೆಳೆ ಒಣಗಿ ಸಂಪೂರ್ಣ ಹಾಳಾಗಿರುವುದನ್ನು ಕಂ

# ಪ್ರತಿ ಹೆಕ್ಟೇರ್‌ಗೆ 50 ಸಾವಿರ ಪರಿಹಾರ ನೀಡಿ, ಕೃಷಿ ಸಾಲ ಮನ್ನಾ ಮಾಡಿ

## ಡಿಡಿ ಮೂಲಕ ಪರಿಹಾರದ ಹಣ ಹಿಂದಿರುಗಿಸಿ ಸಾಂಕೇತಿಕ ಪ್ರತಿಭಟನೆಗೆ ನಿರ್ಧಾರ: ಕುಮಾರ ಬಿ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಸರ್ಕಾರ ಘೋಷಿಸಿರುವ 2,500 ಬರ ಪರಿಹಾರವು ರೈತರ ಸಂಕಷ್ಟಕ್ಕೆ ಯಾವುದೇ ರೀತಿಯಲ್ಲೂ ಸಾಕಾಗುವುದಿಲ್ಲ. ರೈತರು ಬೆಳೆ ಬೆಳೆಯಲು ಮಾಡಿದ ಖರ್ಚಿಗೂ ಈ ಮೊತ್ತ ಸಾಲುವುದಿಲ್ಲ. ಆದ್ದರಿಂದ ಸರ್ಕಾರ ಬರ ಪರಿಹಾರ ಮೊತ್ತವನ್ನು ಮರುಪರಿಶೀಲಿಸಿ, ರೈತರ ನಷ್ಟಕ್ಕೆ ಅನುಗುಣವಾಗಿ ನ್ಯಾಯಯುತ ಪರಿಹಾರ ನೀಡಬೇಕು ಎಂದು ಜಗಳೂರು ತಾಲ್ಲೂಕು ರೈತ ಸಂಘದ ಅಧ್ಯಕ್ಷ ಕುಮಾರ ಬಿ. ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ಮಹಾತ್ಮ ಗಾಂಧಿ ವೃತ್ತ ಹಾಗೂ ಅಂಬೇಡ್ಕರ್ ವೃತ್ತದ ಮೂಲಕ ತಾಲೂಕು ಕಚೇರಿಗೆ ತೆರಳಿ, ತಹಶೀಲ್ದಾರ್ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಜಗಳೂರು ತಾಲ್ಲೂಕಿನ ಬಹುತೇಕ ರೈತರು ಮಳೆಯನ್ನೇ ಅವಲಂಬಿಸಿ ಕೃಷಿ ಮಾಡುತ್ತಿದ್ದಾರೆ. ಆದರೆ ಸಮರ್ಪಕ ಮಳೆಯಿಲ್ಲದೆ ಜೋಳ, ರಾಗಿ, ಸಜ್ಜೆ, ಕಡಲೆ, ತೊಗರಿ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ಹಾನಿಗೊಳಗಾಗಿವೆ. ರೈತರು ಬಿತ್ತನೆ ಬೀಜ, ಗೊಬ್ಬರ, ಕೃಷಿ ಔಷಧಿ ಹಾಗೂ ಕೂಲಿ ಕಾರ್ಮಿಕರ ವೆಚ್ಚಕ್ಕಾಗಿ ಸಾಲ ಮಾಡಿ ಕೃಷಿ ಚಟುವಟಿಕೆ ನಡೆಸಿದ್ದಾರೆ. ಬೆಳೆ ಕೈಕೊಟ್ಟ ಪರಿಣಾಮ ಸಾಲ ತೀರಿಸಲಾಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದರು.

ಇಂತಹ ಸಂದರ್ಭದಲ್ಲಿ ಸರ್ಕಾರ ಘೋಷಿಸಿರುವ 2,500 ಬರ ಪರಿಹಾರ ರೈತರ ಸಂಕಷ್ಟಕ್ಕೆ ಸ್ಪಂದಿಸುವಂತಿಲ್ಲ. ಕೃಷಿ ಚಟುವಟಿಕೆಗಳಿಗೆ ಸಾವಿರಾರು ರೂಪಾಯಿ ಖರ್ಚು ಮಾಡಿದ ರೈತರಿಗೆ ಇಷ್ಟು ಕಡಿಮೆ ಪರಿಹಾರ ನೀಡುವುದು ನ್ಯಾಯಸಮ್ಮತವಲ್ಲ. ಆದ್ದರಿಂದ ಪ್ರತಿ ಹೆಕ್ಟೇರ್‌ಗೆ 50 ಸಾವಿರ ಪರಿಹಾರ ನೀಡುವ ಮೂಲಕ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಒತ್ತಾಯಿಸಿದರು.

**ರೈತರ ಸಾಲ ಮನ್ನಾ ಮಾಡಲಿ**

ಬರಗಾಲದಿಂದ ಬೆಳೆ ನಷ್ಟ ಅನುಭವಿಸಿರುವ ರೈತರು ಒಂದೆಡೆ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದರೆ, ಮತ್ತೊಂದೆಡೆ ಕೃಷಿ ಸಾಲ ಮರುಪಾವತಿಯ ಒತ್ತಡದಿಂದ ಕಂಗಾಲಾಗಿದ್ದಾರೆ. ರೈತರ ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಅರ್ಹ ರೈತರ ಕೃಷಿ ಸಾಲ ಮನ್ನಾ ಮಾಡುವ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು. ಬರಗಾಲದ ಸಂದರ್ಭದಲ್ಲಿ ರೈತರ ಮೇಲೆ ಸಾಲ ವಸೂಲಾತಿಯ ಒತ್ತಡ ಹೇರದಂತೆ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.




**ಡಿಡಿ ಮೂಲಕ ಸರ್ಕಾರಕ್ಕೆ ಹಣ ಹಿಂದಿರುಗಿಸಲು ನಿರ್ಧಾರ**

ಸರ್ಕಾರ ಘೋಷಿಸಿರುವ 2,500 ಬರ ಪರಿಹಾರದ ಮೊತ್ತದ ಬಗ್ಗೆ ರೈತರ ಅಸಮಾಧಾನವನ್ನು ಪ್ರಜಾಸತ್ತಾತ್ಮಕವಾಗಿ ವ್ಯಕ್ತಪಡಿಸಲು ನಿರ್ಧರಿಸಲಾಗಿದೆ. ರೈತರು ಹಾಗೂ ಸಾರ್ವಜನಿಕರಿಂದ ಸ್ವಯಂಪ್ರೇರಿತವಾಗಿ ಹಣ ಸಂಗ್ರಹಿಸಿ, ಡಿಮ್ಯಾಂಡ್ ಡ್ರಾಫ್ಟ್ (ಡಿಡಿ) ಮೂಲಕ ಸರ್ಕಾರಕ್ಕೆ ಹಿಂದಿರುಗಿಸುವ ಸಾಂಕೇತಿಕ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿದೆ. ಈ ಪ್ರತಿಭಟನೆಗೆ ಅಗತ್ಯ ಅನುಮತಿ ನೀಡುವುದರ ಜೊತೆಗೆ, ಹಣವನ್ನು ಯಾವ ಇಲಾಖೆಗೆ ಹಾಗೂ ಯಾವ ಅಧಿಕೃತ ವಿಧಾನದ ಮೂಲಕ ಹಿಂದಿರುಗಿಸಬೇಕು ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟಪಡಿಸಬೇಕು ಎಂದು ಮನವಿ ಮಾಡಲಾಗಿದೆ ಎಂದರು.

ರೈತರು ದೇಶದ ಬೆನ್ನೆಲುಬಾಗಿದ್ದು, ಅವರ ಬದುಕು ಸಂಕಷ್ಟಕ್ಕೆ ಸಿಲುಕಿದಾಗ ಸರ್ಕಾರ ನೆರವಿಗೆ ಬರಬೇಕು. ರೈತರ ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ಒದಗಿಸಿ, ಸಾಲದ ಹೊರೆಯಿಂದ ಮುಕ್ತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ರೈತರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಕುಮಾರ ಬಿ. ಎಚ್ಚರಿಸಿದರು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಪಾಲನಾಯಕ, ಹಸಿರು ಸೇನೆ ಅಧ್ಯಕ್ಷ ಜಗದೀಶ್, ಗೌರವಾಧ್ಯಕ್ಷ ಸೂರಪ್ಪ, ಕಾರ್ಯದರ್ಶಿ ವಾಸಣ್ಣ, ಕ್ಯಾಸೇನಹಳ್ಳಿ ಗ್ರಾಮ ಘಟಕದ ಉಪಾಧ್ಯಕ್ಷ ಲೋಕೇಶ್, ಪ್ರಧಾನ ಕಾರ್ಯದರ್ಶಿ ಓಬಳೇಶ್, ಕಾರ್ಯದರ್ಶಿ ಮಂಜು, ಭರಮಸಮುದ್ರ ಗ್ರಾಮ ಘಟಕದ ಅಧ್ಯಕ್ಷ ಚೆನ್ನಪ್ಪ, ಗೌರವಾಧ್ಯಕ್ಷ ಏಕಾಂತಪ್ಪ, ಉಪಾಧ್ಯಕ್ಷ ಚಂದ್ರಪ್ಪ, ಆಕನೂರು ಗ್ರಾಮ ಘಟಕದ ಅಧ್ಯಕ್ಷ ಕಾಡಪ್ಪ, ಹನುಮಂತಪುರ ಗ್ರಾಮ ಘಟಕದ ಉಪಾಧ್ಯಕ್ಷ ಮಾರುತಿಣ್ಣ, ಹನುಮಂತಪುರ ಗೊಲ್ಲರಟ್ಟಿ ಗ್ರಾಮ ಘಟಕದ ಅಧ್ಯಕ್ಷ ಈರಪ್ಪ, ಮಲ್ಲಾಪುರ ಗ್ರಾಮ ಘಟಕದ ಅಧ್ಯಕ್ಷ ಬೋರಪ್ಪ, ನಿವೃತ್ತ ಶಿಕ್ಷಕರಾದ ಮಂಜಪ್ಪ, ಶಾಮಣ್ಣ, ರಾಮೇಶ್, ಹನುಮಂತಪ್ಪ, ಗೌಡಗುಂಡನಹಳ್ಳಿ ಮಂಜಪ್ಪ, ಸೇರಿದಂತೆ ಅನೇಕ ರೈತ ಮುಖಂಡರು ಉಪಸ್ಥಿತರಿದ್ದರು.

# ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆ: ಸಕಲ ಸಿದ್ಧತೆ

## ಚುನಾವಣಾ ಅಕ್ರಮ ತಡೆಗೆ ವಿವಿಧ ತಂಡಗಳ ನಿಯೋಜನೆ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತವಾಗಿ ನಡೆಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಲಾಗುತ್ತಿದೆ ಎಂದು ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದರು.

ಸೋಮವಾರ ಪಟ್ಟಣದ ತಾಲೂಕು ಕಚೇರಿಯಲ್ಲಿ ಪತ್ರಕರ್ತರಿಗೆ ಚುನಾವಣಾ ಸಿದ್ಧತೆಗಳ ಕುರಿತು ಮಾಹಿತಿ ನೀಡಿದ ಅವರು, ಅ. 23ರಂದು ನಡೆಯಲಿರುವ ಚುನಾವಣೆಗೆ ಸಂಬಂಧಿಸಿದಂತೆ ಮತಗಟ್ಟೆಗಳ ವ್ಯವಸ್ಥೆ, ಸಿಬ್ಬಂದಿ ನಿಯೋಜನೆ ಹಾಗೂ ಚುನಾವಣಾ ನೀತಿ ಸಂಹಿತೆ ಪಾಲನೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

**ನಾಲ್ಕು ಮತಗಟ್ಟೆ ಕೇಂದ್ರಗಳ ಸ್ಥಾಪನೆ**

ಆಗ್ನೇಯ ಪದವೀಧರರ ಕ್ಷೇತ್ರದ ಚುನಾವಣೆಗೆ ಜಗಳೂರು ತಾಲೂಕಿನಲ್ಲಿ ನಾಲ್ಕು ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಜಗಳೂರು ಪಟ್ಟಣದಲ್ಲಿ ಎರಡು ಮತಗಟ್ಟೆ ಕೇಂದ್ರಗಳು ಹಾಗೂ ತಾಲೂಕಿನ ಬಿಳಿಚೋಡು ಮತ್ತು ಹೊಸಕೆರೆಗಳಲ್ಲಿ ತಲಾ ಒಂದು ಮತಗಟ್ಟೆ ಕೇಂದ್ರ ಸ್ಥಾಪಿಸಲಾಗಿದೆ ಎಂದು ಮಾಹಿತಿ ನೀಡಿದರು.



ಚುನಾವಣಾ ಪ್ರಕ್ರಿಯೆ ಸುಗಮವಾಗಿ ನಡೆಯಲು ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದ್ದು, ಮತದಾರರು ಯಾವುದೇ ಗೊಂದಲವಿಲ್ಲದೆ ಮತ ಚಲಾಯಿಸಲು ಅನುಕೂಲ ಕಲ್ಪಿಸಲಾಗುವುದು. ಮತಗಟ್ಟೆಗಳಲ್ಲಿ ಚುನಾವಣಾ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು ಎಂದು ತಿಳಿಸಿದರು.

**ಚುನಾವಣಾ ಅಕ್ರಮ ತಡೆಗೆ ತಂಡಗಳ ನಿಯೋಜನೆ**

ಚುನಾವಣೆಯ ಸಂದರ್ಭದಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನಿಗಾ ವಹಿಸಲು ವಿವಿಧ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ಚುನಾವಣಾ ಪ್ರಕ್ರಿಯೆ ಮೇಲೆ ನಿಗಾ ಇರಿಸುವುದರ ಜತೆಗೆ, ನಿಯಮ ಉಲ್ಲಂಘನೆಗಳು ಕಂಡುಬಂದಲ್ಲಿ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಲಿವೆ ಎಂದು ಹೇಳಿದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ವಿ.ಎಸ್. ಲೋಕ್ಯನಾಯಕ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಚುನಾವಣಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಸಾರ್ವಜನಿಕರು ನಿಯಮಗಳನ್ನು ಪಾಲಿಸುವ ಮೂಲಕ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಚುನಾವಣೆಯನ್ನು ಶಾಂತಿಯುತವಾಗಿ ನಡೆಸಲು ತಾಲೂಕು ಆಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಮತದಾನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅಧಿಕಾರಿಗಳು ನಿರಂತರ ನಿಗಾ ವಹಿಸಲಿದ್ದಾರೆ ಎಂದು ತಹಶೀಲ್ದಾರ್ ಗುರುಬಸವರಾಜ್ ತಿಳಿಸಿದರು.

# ಜಗಳೂರಿನ ಸಮಾಜ ಸೇವಕಿಗೆ

## ಬೆಂಗಳೂರಿನಲ್ಲಿ ಕೆಂಪೇಗೌಡ ಪ್ರಶಸ್ತಿ ಪ್ರದಾನ

**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ಸಮಾಜ ಸೇವಾ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಜಗಳೂರಿನ ದಾರಿದೀಪ ಸಂಸ್ಥೆಯ ಸಂಸ್ಥಾಪಕಿ ಡಾ. ಸುಜಾತ ಅವರಿಗೆ ಬೆಂಗಳೂರಿನ ಎಸ್.ಎಸ್. ಕಲಸಂಗಮ ಟ್ರಸ್ಟ್ ವತಿಯಿಂದ ಕೆಂಪೇಗೌಡ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.




ಬೆಂಗಳೂರಿನ ಮಲ್ಲೇಶ್ವರಂನ ವರದಾಚಾರ್ ಮಂತ್ರಿ ಮಾಲ್ ಸಭಾಂಗಣದಲ್ಲಿ ಎಸ್.ಎಸ್. ಕಲಸಂಗಮ ಟ್ರಸ್ಟ್ ಆಯೋಜಿಸಿದ್ದ ಕನ್ನಡ ಸಾಹಿತ್ಯ ಸಂಭ್ರಮ ಕಾರ್ಯಕ್ರಮದಲ್ಲಿ ಡಾ. ಸುಜಾತ ಅವರಿಗೆ ಈ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜಗಳೂರು ತಾಲೂಕಿನಲ್ಲಿ ಸಮಾಜ ಸೇವೆಯ ಮೂಲಕ ಗುರುತಿಸಿಕೊಂಡಿರುವ ಡಾ. ಸುಜಾತ ಅವರು ಸಲ್ಲಿಸುತ್ತಿರುವ ನಿರಂತರ ಸೇವೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ. ಸಮಾಜದ ಅಭಿವೃದ್ಧಿ, ಜನರ ಕಲ್ಯಾಣ ಮತ್ತು ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಅವರ ಕಾರ್ಯಕ್ಕೆ ಈ ಪ್ರಶಸ್ತಿ ಮತ್ತಷ್ಟು ಪ್ರೋತ್ಸಾಹ ನೀಡಿದಂತಾಗಿದೆ.

ಕಾರ್ಯಕ್ರಮದಲ್ಲಿ ಚಲನಚಿತ್ರ ನಟ ಶಶಿಧರ್ ಕೋಟೆ, ಖ್ಯಾತ ಗಾಯಕರು, ಆರೋಗ್ಯ ಕ್ಷೇತ್ರದ ತಜ್ಞ ಡಾ. ಆಂಜನಪ್ಪ ಟಿ.ಎಚ್., ನಟಿ ತನುಪ್ರಸಾದ್, ಡಾ. ದರ್ಶನ್ ಬಿ., ಚಲನಚಿತ್ರ ನಟ ಹಾಗೂ ನಿರ್ಮಾಪಕ, ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಶಿವಕುಮಾರ್ ಬಿ.ಕೆ., ಪ್ರಗತಿಪರ ರೈತ ರಾಜುಗೌಡ, ಡಾ. ಡಿ. ಪೂಜಾರಿ ಹುಂಡೇಕಲ್, ಡಾ. ಭ್ರಮರ ಶಿವಶಂಕರ್, ಭಾಗ್ಯಶ್ರೀ ಬಾಬಣ್ಣ ಹಾಗೂ ಡಾ. ಬಿ. ಶಂಕರ್ ಸೇರಿದಂತೆ ಸಾಹಿತ್ಯ, ಸಂಗೀತ, ಕಲೆ ಮತ್ತು ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

# ಹಾಳು ಕೊಂಪೆಯಾದ ಮೆದಕೆರೆನಹಳ್ಳಿ ಬಸ್ ತಂಗುದಾಣ!

## ಮಳೆ, ಬಿಸಿಲಿನಿಂದ ರಕ್ಷಣೆ ನೀಡಬೇಕಾದ ಕಟ್ಟಡಕ್ಕೆ ಮುಳ್ಳುಪೊದೆಗಳೇ ಆವರಣ

**"ಮುಂಜಾನೆಯ ಮೆರಗು"**

ಜಗಳೂರು: ಪ್ರಯಾಣಿಕರು ಮಳೆ ಮತ್ತು ಬಿಸಿಲಿನಿಂದ ರಕ್ಷಣೆ ಪಡೆಯಲಿ ಎಂಬ ಉದ್ದೇಶದಿಂದ ನಿರ್ಮಿಸಲಾದ ತಾಲೂಕಿನ ಮೆದಕೆರೆನಹಳ್ಳಿ ಗ್ರಾಮದ ಬಸ್ ತಂಗುದಾಣದ ಕಟ್ಟಡ ಇದೀಗ ನಿರ್ವಹಣೆಯ ಕೊರತೆಯಿಂದ ಹಾಳು ಕೊಂಪೆಯಾಗಿ ಮಾರ್ಪಟ್ಟಿದೆ. ತಂಗುದಾಣದ ಸುತ್ತಮುತ್ತ ಮುಳ್ಳಿನ ಪೊದೆಗಳು ಬೆಳೆದು ಆವರಿಸಿಕೊಂಡಿದ್ದು, ಸಾರ್ವಜನಿಕರ ಬಳಕೆಗೆ ಇರಬೇಕಾದ ಕಟ್ಟಡ ನಿರ್ಲಕ್ಷ್ಯಕ್ಕೆ ಒಳಗಾಗಿದೆ.

ಗ್ರಾಮೀಣ ಭಾಗದಲ್ಲಿ ಸಾರ್ವಜನಿಕ ಸಾರಿಗೆಯನ್ನೇ ಅವಲಂಬಿಸಿರುವ ಜನರಿಗೆ ಬಸ್ ತಂಗುದಾಣಗಳು ಅತ್ಯಗತ್ಯ. ಶಾಲಾ–ಕಾಲೇಜು ವಿದ್ಯಾರ್ಥಿಗಳು, ಮಹಿಳೆಯರು, ವೃದ್ಧರು ಸೇರಿದಂತೆ ಪ್ರತಿನಿತ್ಯ ಅನೇಕರು ಬಸ್‌ಗಳಿಗಾಗಿ ಕಾಯುತ್ತಿರುತ್ತಾರೆ. ಮಳೆ ಬಂದಾಗ ನೆನೆಯದಂತೆ, ಬಿಸಿಲಿನ ತಾಪದಿಂದ ರಕ್ಷಣೆ ಪಡೆಯಲು ಅನುಕೂಲವಾಗಬೇಕಾದ ತಂಗುದಾಣವೇ ಈಗ ಅವ್ಯವಸ್ಥೆಯ ತಾಣವಾಗಿ ಪರಿಣಮಿಸಿರುವುದು ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ.

**ನಿರ್ವಹಣೆ ಕೊರತೆಯೋ, ನಿರ್ಲಕ್ಷ್ಯವೋ?**

ಬಸ್ ತಂಗುದಾಣ ನಿರ್ಮಿಸಿದ ಬಳಿಕ ಅದರ ಸಮರ್ಪಕ ನಿರ್ವಹಣೆ ಮಾಡಬೇಕಾದ ಹೊಣೆಗಾರಿಕೆ ಸಂಬಂಧಪಟ್ಟ ಇಲಾಖೆಯ ಮೇಲಿದೆ. ಆದರೆ ಮೆದಕೆರೆನಹಳ್ಳಿ ಗ್ರಾಮದ ತಂಗುದಾಣದ ಸುತ್ತಮುತ್ತ ಮುಳ್ಳುಪೊದೆಗಳು ಬೆಳೆದು ನಿಂತಿರುವುದನ್ನು ಗಮನಿಸಿದರೆ, ಸ್ವಚ್ಛತೆ ಮತ್ತು ನಿರ್ವಹಣೆಗೆ ಆದ್ಯತೆ ನೀಡಲಾಗುತ್ತಿದೆಯೇ ಎಂಬ ಪ್ರಶ್ನೆ ಮೂಡುತ್ತದೆ. ಕಟ್ಟಡದ ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಡದಿರುವುದು ತಂಗುದಾಣದ ಬಳಕೆಗೆ ಅಡ್ಡಿಯಾಗುವ ಸಾಧ್ಯತೆಯಿದೆ.

ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಿರುವ ಕಟ್ಟಡಗಳು ಕಾಲಕ್ರಮೇಣ ಹಾಳಾಗದಂತೆ ಸೂಕ್ತ ನಿರ್ವಹಣೆ ಮಾಡುವುದು ಅಗತ್ಯ. ಆದರೆ ಇಲ್ಲಿ ತಂಗುದಾಣದ ಸ್ಥಿತಿ ಕಂಡುಬಂದರೆ, ಸಾರ್ವಜನಿಕ ಆಸ್ತಿಗಳ ಸಂರಕ್ಷಣೆಯ ಬಗ್ಗೆ ಸಂಬಂಧಪಟ್ಟವರು ಎಷ್ಟರಮಟ್ಟಿಗೆ ಕಾಳಜಿ ವಹಿಸುತ್ತಿದ್ದಾರೆ ಎಂಬ ಪ್ರಶ್ನೆ ಎದುರಾಗುತ್ತದೆ.


**ಅಧಿಕಾರಿಗಳು ಗಮನಹರಿಸುವರೇ?**

ಮೆದಕೆರೆನಹಳ್ಳಿ ಗ್ರಾಮದ ಬಸ್ ತಂಗುದಾಣದ ಸುತ್ತ ಬೆಳೆದಿರುವ ಮುಳ್ಳುಪೊದೆಗಳನ್ನು ತೆರವುಗೊಳಿಸಿ, ಕಟ್ಟಡವನ್ನು ಸ್ವಚ್ಛಗೊಳಿಸಿ ಪ್ರಯಾಣಿಕರ ಬಳಕೆಗೆ ಅನುಕೂಲ ಮಾಡಿಕೊಡಬೇಕೆಂಬುದು ಸಾರ್ವಜನಿಕರ ನಿರೀಕ್ಷೆಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ತಂಗುದಾಣದ ಸ್ಥಿತಿಗತಿಯನ್ನು ಅವಲೋಕಿಸಿ, ಅಗತ್ಯ ದುರಸ್ತಿ ಮತ್ತು ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕಿದೆ.




ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಿದ ಕಟ್ಟಡಗಳು ನಿರ್ಲಕ್ಷ್ಯದಿಂದ ಪಾಳು ಬೀಳುವ ಮುನ್ನವೇ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು. ಇಲ್ಲದಿದ್ದರೆ ಜನರ ಅನುಕೂಲಕ್ಕಾಗಿ ನಿರ್ಮಿಸಿದ ಸೌಲಭ್ಯಗಳು ಇದ್ದೂ ಇಲ್ಲದಂತಾಗುವ ಪರಿಸ್ಥಿತಿ ಮುಂದುವರಿಯಲಿದೆ.

# ಅಡಕೆ, ತೆಂಗು ಬೆಳೆಗಾರರ ಸಂಘ ಸ್ಥಾಪನೆಗೆ ನಿರ್ಧಾರ



**"ಮುಂಜಾನೆಯ ಮೆರಗು"**

**ಜಗಳೂರು ಅ, 12–** ತಾಲೂಕಿನಲ್ಲಿ ಅಡಕೆ ಮತ್ತು ತೆಂಗು ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ಬೆಳೆಗಾರರ ಸಹಕಾರ ಸಂಘ ಸ್ಥಾಪಿಸಲು ಸೋಮವಾರ ಪಟ್ಟಣದ ಪೌರಕಾರ್ಮಿಕರ ಸಂಘದ ಸಭಾಂಗಣದಲ್ಲಿ ರೈತರ ಸಭೆ ನಡೆಯಿತು.

ಈ ವೇಳೆ ಸಂಘದ ಮಾರ್ಗದರ್ಶಕರಾಗಿ ರಾಜಣ್ಣ, ರವಿ, ಎನ್.ಎಸ್.ರಾಜು, ಹಾಲಪ್ಪ, ಪ್ರಕಾಶ್, ಗಿರೀಶ್ ಗೌಡ, ದೀಪಕ್ ಪಟೇಲ್, ಮಂಜುನಾಥ್, ಯಲ್ಲಪ್ಪ, ಸೋಮನಗೌಡ, ಜಗದೀಶ್ ಗೌಡ, ತಿಪ್ಪೇಸ್ವಾಮಿ, ಸಿದ್ದೇಶ್ ಇತರರು ಆಯ್ಕೆಯಾಗಿದ್ದಾರೆ.

# ನಳದಲ್ಲಿ ನೀರಿಲ್ಲ, ಅಧಿಕಾರಿಗಳಿಗೂ ಕಾಳಜಿಯಿಲ್ಲವೇ? ಪಲ್ಲಾಗಟ್ಟೆಯಲ್ಲಿ ವಿನೂತನ ಪ್ರತಿಭಟನೆ!

## ಪಲ್ಲಾಗಟ್ಟೆ ಗ್ರಾ.ಪಂ.ಗೆ ಬೀಗ ಜಡಿದು, ಆವರಣದಲ್ಲೇ ಅಡುಗೆ ತಯಾರಿಸಿ ಗ್ರಾಮಸ್ಥರ ವಿನೂತನ ಪ್ರತಿಭಟನೆ

**"ಮುಂಜಾನೆಯ ಮೆರಗು"**

**ಜಗಳೂರು, ಅ.12–** ಗ್ರಾಮದಲ್ಲಿ ನಾಲ್ಕು ಬೋರ್‌ವೆಲ್‌ಗಳಲ್ಲಿ ನೀರಿದ್ದರೂ ಸಮರ್ಪಕ ಕುಡಿಯುವ ನೀರು ಪೂರೈಕೆಯಾಗುತ್ತಿ